ಸಂಪುಟ: 4 ಸಂಚಿಕೆ 98 ಪುಟ: 4 ₹: 4 newsbelagavi@gmail.com 9900332089 9900332089

ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Read,Share and Follow - www.belagavivaradi.com

Vol-04 Issue: 98 Thursday, 01, June, 2023 RNI: KARKAN/2020/79084 Regn,No:G-2/PMG/KA/NK/BM/139/2021-23

ಸಂಪುಟ ಸಭೆ ಜೂನ್ 2ಕ್ಕೆ ಮುಂದೂಡಿಕೆ

ಗ್ಯಾರೆಂಟಿ ಯೋಜನೆ ಜಾರಿ ಖಚಿತ: ಸಿಎಂ ಸಿದ್ಧರಾಮಯ್ಯ

ಬೆಂಗಳೂರು: ಐದು ಗ್ಯಾರೆಂಟಿಗಳ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದ್ದು, ಜೂನ್ 2ರಂದು ನಡೆಯಲಿರುವ ಸಚಿವ ಸಂಪುಟದ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದರು.

ಐದು ಗ್ಯಾರಂಟಿ ಯೋಜನೆಗಳ ಜಾರಿ ಹಿನ್ನೆಲೆಯಲ್ಲಿ ಬುಧವಾರ ವಿಧಾನಸೌಧದ ಸಭಾಂಗಣದಲ್ಲಿ ಎಲ್ಲಾ ಸಚಿವರುಗಳು ಮತ್ತು ಸಂಬಂಧಪಟ್ಟ ಇಲಾಖೆಗಳ ಹಿರಿಯ ಅಧಿಕಾರಿಗಳ ಜತೆ ಮುಖ್ಯಮಂತ್ರಿಗಳು ಅತ್ಯಂತ ಮಹತ್ವದ ಸಭೆಯನ್ನು ನಡೆಸಿದರು. ನಂತರ ಮಾತನಾಡಿದ ಅವರು, ಐದು ಗ್ಯಾರೆಂಟಿ ಯೋಜನೆಗಳಿಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯ ಅಧಿಕಾರಿಗಳು ಸಚಿವರಿಗೆ ಗ್ಯಾರೆಂಟಿ ಯೋಜನೆಗಳ ಆರ್ಥಿಕ ಪರಿಣಾಮ ಸೇರಿದಂತೆ ವಿವರಗಳ ಪ್ರಾತ್ಯಕ್ಷಿಕೆಯನ್ನು ಸಲ್ಲಿಸಿದ್ದಾರೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಸರ್ಕಾರದ 5 ಗ್ಯಾರೆಂಟಿ ಯೋಜನೆಗಳ ಜಾರಿಗೆ ಹಣಕಾಸು ಇಲಾಖೆ ಅಧಿಕಾರಿಗಳು ವಿರೋಧ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ಹೀಗಾಗಿ ಗುರುವಾರ ನಿಗದಿ ಪಡಿಸಲಾಗಿದ್ದ ಸಚಿವ ಸಂಪುಟ ಶುಕ್ರವಾರವಾರಕ್ಕೆ ಮುಂದೂಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಶುಕ್ರವಾರ ಬೆಳಗ್ಗೆ 11 ಗಂಟೆಗೆ ಸಂಪುಟ ಸಭೆ ನಡೆಯಲಿದೆ. ಐದು ಗ್ಯಾರಂಟಿಗಳ ಜಾರಿ ಸಂಬಂಧ ಮತ್ತಷ್ಟು ತಯಾರಿ ಅಗತ್ಯ ಹಿನ್ನೆಲೆ ನಾಳೆಯೂ ಕೂಡ ಅಧಿಕಾರಿಗಳು, ಸಚಿವರು ಪ್ರತ್ಯೇಕ ಸಭೆ ನಡೆಸಲಿದ್ದಾರೆ.

ಎಲ್ಲಾ ಗ್ಯಾರೆಂಟಿಗಳ ಜಾರಿಗೆ ಹಣಕಾಸು ಹೊಂದಿಸುವುದು ಕಷ್ಟ ಎಂದು ಹಣಕಾಸು ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಅಲ್ಲದೆ ಒಂದು ದಿನ ಕಾಲಾವಕಾಶ ನೀಡುವಂತೆ ಮನವಿ ಮಾಡಿದ್ದಾರೆ ಎನ್ನಲಾಗಿದೆ.

ರಾಗಿ ಬೆಳೆಗಾರರಿಗೆ ಹಣ ಪಾವತಿ ಸಮಸ್ಯೆ ತಕ್ಷಣ ಬಗೆಹರಿಸಲು ಸಿಎಂ ಸಿದ್ದರಾಮಯ್ಯ ಸೂಚನೆ

ಬೆಂಗಳೂರು: ರಾಗಿ ಬೆಳೆಗಾರರಿಗೆ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಸಮರ್ಪಕವಾಗಿ ಹಣ ಪಾವತಿಯಾಗದೆ ಇರುವ ಸಮಸ್ಯೆಯನ್ನು ಕನಿಷ್ಠ ಬೆಂಬಲ ಬೆಲೆ (MSP) ಯೋಜನೆಯಡಿ ತಕ್ಷಣ ಬಗೆಹರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚಿಸಿದರು. ಬೆಂಗಳೂರಿನ ತಮ್ಮ ಗೃಹ ಕಚೇರಿ ಕೃಷ್ಣದಲ್ಲಿ ರಾಗಿ ಬೆಳೆಗಾರರು ಮತ್ತು ರೈತ ಸಮುದಾಯಗಳನ್ನು ಭೇಟಿ ಮಾಡಿ ರೈತರ ಸಮಸ್ಯೆಗಳನ್ನು ಆಲಿಸಿ ಅವರು ಅಹವಾಲುಗಳನ್ನು ಸ್ವೀಕರಿಸಿದರು.

ರಾಗಿ ಬೆಳೆಗಾರರಿಗೆ ಹಣ ಪಾವತಿಸುವಲ್ಲಿ ಆಗುತ್ತಿರುವ ತಾಂತ್ರಿಕ ಸಮಸ್ಯೆಗಳನ್ನು ತಕ್ಷಣ ಬಗೆಹರಿಸಿ ರೈತರಿಗೆ ಅನಾನುಕೂಲ ಆಗದಂತೆ ನೋಡಿಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಪ್ರತಿಪಕ್ಷಗಳು ಒಗ್ಗೂಡಿದರೆ ಬಿಜೆಪಿ ಸೋಲಿಸಬಹುದು: ರಾಹುಲ್ ಗಾಂಧಿ

ಸಾಂಟಾ ಕ್ಲಾರಾ: ಪ್ರತಿಪಕ್ಷಗಳು ಸೂಕ್ತರೀತಿಯಲ್ಲಿ ಹೊಂದಾಣಿಕೆ ಮಾಡಿಕೊಂಡರೆ ಆಡಳಿತಾರೂಢ ಬಿಜೆಪಿ ಪಕ್ಷವನ್ನು ಸೋಲಿಸಬಹುದು, ಕಾಂಗ್ರೆಸ್ ಪಕ್ಷವು ಆ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರು ಹೇಳಿದ್ದಾರೆ.

ಸಾಂಟಾಕ್ರೂಜ್‌ನಲ್ಲಿರುವ ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯದ ಸಿಲಿಕಾನ್ ವ್ಯಾಲಿ ಕ್ಯಾಂಪಸ್‌ನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿರುವ ಅವರು, ಬಿಜೆಪಿಯಲ್ಲಿನ ದುರ್ಬಲತೆಗಳು ಸ್ಪಷ್ಟವಾಗುತ್ತಿವೆ. ಪ್ರತಿಪಕ್ಷಗಳು ಸರಿಯಾಗಿ ಹೊಂದಾಣಿಕೆ ಮಾಡಿಕೊಂಡಿದ್ದೇ ಆದರೆ, ಬಿಜೆಪಿಯನ್ನು ಸೋಲಿಸಬಹುದು ಎಂದು ಹೇಳಿದ್ದಾರೆ.

ಕರ್ನಾಟಕ ರಾಜ್ಯ ವಿಧಾನಸಭಾ ಚುನಾವಣೆ ಫಲಿತಾಂಶವನ್ನು ಗಮನಿಸಿದರೆ, ಬಿಜೆಪಿ ವಿರುದ್ಧ ಹೋರಾಡಿ ಆ ಪಕ್ಷವನ್ನು ಸೋಲಿಸಬಹುದು ಎಂಬುದು ಅರಿವಿಗೆ ಬರುತ್ತಿದೆ. ಆದರೆ, ಈ ತಂತ್ರ ಅರ್ಥಮಾಡಿಕೊಳ್ಳಲು ಸಾಧ್ಯವಾಗಿರಲಿಲ್ಲ. ಈ ಚುನಾವಣೆ ಎದುರಿಸಲು ಕಾಂಗ್ರೆಸ್ ಪಕ್ಷ ಸಂಪೂರ್ಣ ವಿಭಿನ್ನವಾದ ವಿಧಾನವನ್ನು ಬಳಸಿತ್ತು. ಭಾರತ್ ಜೋಡೋ ಯಾತ್ರೆ ಬಳಿಕ ಈ ಬದಲಾವಣೆಗಳು ಕಂಡು ಬಂದವು ಎಂದು ತಿಳಿಸಿದರು.

224 ಸದಸ್ಯ ಬಲದ ಕರ್ನಾಟಕ ವಿಧಾನಸಭೆಗೆ ಮೇ 10 ರಂದು ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ 135 ಸ್ಥಾನಗಳನ್ನು ಗೆದ್ದರೆ, ಹಾಲಿ ಬಿಜೆಪಿ ಮತ್ತು ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ನೇತೃತ್ವದ ಜನತಾ ದಳ (ಜಾತ್ಯತೀತ) ಕ್ರಮವಾಗಿ 66 ಮತ್ತು 19 ಸ್ಥಾನಗಳನ್ನು ಗಳಿಸಿತು.

ಕರ್ನಾಟಕ ಚುನಾವಣೆಯಲ್ಲಿ ಬಿಜೆಪಿ ಕಾಂಗ್ರೆಸ್ ಪಕ್ಷಕ್ಕಿಂತ 10 ಪಟ್ಟು ಹೆಚ್ಚು ಹಣವನ್ನು ಖರ್ಚು ಮಾಡಿತ್ತು. 2024ರ ಸಾರ್ವತ್ರಿಕ ಚುನಾವಣೆಯಲ್ಲಿ ಒಗ್ಗಟ್ಟಿನ ಮಂತ್ರ ಪಠಿಸುವುದು ಅಗತ್ಯವಿಗೆ. ಬಿಜೆಪಿ ಸೋಲಿಸಲು ಪ್ರತಿಪಕ್ಷಗಳ ಒಗ್ಗಟ್ಟು ಮಾತ್ರವಲ್ಲ ಪರ್ಯಾಯ ದೃಷ್ಟಿಕೋನದ ಅಗತ್ಯವಿದೆ ಎಂಬುದು ನನ್ನ ಅಭಿಪ್ರಾಯ.

ಭಾರತ್ ಜೋಡೋ ಯಾತ್ರೆಯ ಭಾಗವು ಅಂತಹ ದೃಷ್ಟಿಕೋನವನ್ನು ಪ್ರತಿಪಾದಿಸುವ ಮೊದಲ ಹೆಜ್ಜೆಯಾಗಿದೆ.

ಇದು ಎಲ್ಲಾ ವಿರೋಧ ಪಕ್ಷಗಳು ಹೊಂದಿಕೊಂಡಿರುವ ದೃಷ್ಟಿಕೋನವಾಗಿದೆ. ಭಾರತ್ ಜೋಡೋ ಯಾತ್ರೆಯ ಕಲ್ಪನೆಯನ್ನು ಯಾವುದೇ ವಿರೋಧ ಪಕ್ಷವು ವಿರೋಧಿಸಲಿಲ್ಲ.

ಭಾರತ್ ಜೋಡೋ ಯಾತ್ರೆ (ಯುನೈಟ್ ಇಂಡಿಯಾ ಮಾರ್ಚ್) ಭಾರತವನ್ನು ಒಗ್ಗೂಡಿಸುವ ಗುರಿಯನ್ನು ಹೊಂದಿರುವ ಸಾಮೂಹಿಕ ಚಳುವಳಿಯಾಗಿದೆ. ಯಾತ್ರೆಯು ಸೆಪ್ಟೆಂಬರ್ 7 ರಂದು ಕನ್ಯಾಕುಮಾರಿಯಿಂದ ಪ್ರಾರಂಭವಾಯಿತು, 12 ರಾಜ್ಯಗಳ ಮೂಲಕ ಹಾದುಹೋಯಿತು. ಜನವರಿ 31 ರಂದು ಜಮ್ಮು ಮತ್ತು ಕಾಶ್ಮೀರದಲ್ಲಿ ಕೊನೆಗೊಂಡಿತು.

ಯಾತ್ರೆ ವೇಳೆ 12 ಸಾರ್ವಜನಿಕ ಸಭೆಗಳು, 100 ಕ್ಕೂ ಹೆಚ್ಚು ಪ್ರಾದೇಶಿಕ ಸಭೆಗಳು ಮತ್ತು 13 ಪತ್ರಿಕಾಗೋಷ್ಠಿಗಳನ್ನು ನಡೆಸಲಾಯಿತು ಎಂದು ಮಾಹಿತಿ ನೀಡಿದರು.

ಇದೇ ವೇಳೆ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಬಿಜೆಪಿ ಮತ್ತು ಆರೆಸ್ಸೆಸ್ ಸಂವಿಧಾನದ ಮೇಲೆ ದಾಳಿ ನಡೆಸುತ್ತಿದೆ ಎಂದು ಆರೋಪಿಸಿದರು,

ಇವರು ದೇಶವನ್ನು ಜಾತಿ ಮತ್ತು ಧಾರ್ಮಿಕ ಆಧಾರದ ಮೇಲೆ ವಿಭಜಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಿದರು.

ಜಗದೀಶ ಶೆಟ್ಟರ್ ಜತೆ ಡಿಸಿಎಂ ಮಹತ್ವದ ಚರ್ಚೆ

ಹುಬ್ಬಳ್ಳಿ: ಇಲ್ಲಿನ ಕೇಶ್ವಾಪುರದ ಮಧುರಾ ಎಸ್ಟೇಟ್'ನಲ್ಲಿರುವ ಕಾಂಗ್ರೆಸ್ ಮುಖಂಡ ಜಗದೀಶ ಶೆಟ್ಟರ್ ನಿವಾಸಕ್ಕೆ ಬುಧವಾರ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿ ನೀಡಿ, ಕೆಲವೊತ್ತು ಗೋಪ್ಯ ಚರ್ಚೆ ನಡೆಸಿದರು.

ಹುಬ್ಬಳ್ಳಿ ಆಗಮಿಸಿದ ಡಿ.ಕೆ. ಶಿವಕುಮಾರ್ ಅವರು ಶೆಟ್ಟರ್ ಜೊತೆ ಉಪಹಾರ ಸೇವಿಸಿದ ಮುಖಂಡರು ಅರ್ಧ ತಾಸಿಗೂ ಹೆಚ್ಚು ಹೊತ್ತು ಸಚಿವರಾದ ಸತೀಶ ಜಾರಕಿಹೊಳಿ , ಲಕ್ಷ್ಮಿ ಹೆಬ್ಬಾಳಕರ ಮತ್ತು ಶಾಸಕ ಎನ್.ಎಚ್. ಕೋನರಡ್ಡಿ ಇದ್ದರು.

ಶೆಟ್ಟರ್ ಕಾಂಗ್ರೆಸ್ ಸೇರ್ಪಡೆಯಾಗಿದ್ದರಿಂದ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಪಕ್ಷದಲ್ಲಿ ಅವರಿಗೆ ಸೂಕ್ತ ಸ್ಥಾನಮಾನ ನೀಡಬೇಕು' ಎಂದು ಸ್ಥಳೀಯ ಮುಖಂಡರು ಹಾಗೂ ಬೆಂಬಲಿಗರು ಒತ್ತಡ ಹೇರಿದ್ದಾರೆ.

ಶೆಟ್ಟರ್ ಸಹ ಸೂಕ್ತ ಸ್ಥಾನಕ್ಕೆ ಕಾಯುತ್ತೇನೆ ಎಂದು ಇತ್ತೀಚೆಗಷ್ಟೇ ಹೇಳಿಕೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಡಿ.ಕೆ. ಶಿವಕುಮಾರ ಅವರ ಭೇಟಿ ಶೆಟ್ಟರ್ ಬೆಂಬಲಿಗರಲ್ಲಿ ಕುತೂಹಲ ಕೆರಳಿಸಿದೆ. ಶೆಟ್ಟರ್ ನಿವಾಸದ ಎದುರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಶೆಟ್ಟರ್ ಅಭಿಮಾನಿಗಳು ಜಮಾಯಿಸಿದ್ದಾರೆ.

ಜಮ್ಮು-ಕಾಶ್ಮೀರ: ಮೂವರು ಉಗ್ರರ ಬಂಧನ

ಪೂಂಚ್ (ಜಮ್ಮು ಮತ್ತು ಕಾಶ್ಮೀರ): ಜಮ್ಮು ಮತ್ತು ಕಾಶ್ಮೀರದ ಪೂಂಚ್ ಗಡಿ ನಿಯಂತ್ರಣ ರೇಖೆ ಬಳಿ ಗಡಿ ನುಸುಳಲು ಯತ್ನಿಸುತ್ತಿದ್ದ ಮೂವರು ಉಗ್ರರನ್ನು ಭಾರತೀಯ ಸೇನಾಪಡೆ ಬಂಧನಕ್ಕೊಳಪಡಿಸಿದೆ.

ಮೇ 30-31 ರ ಮಧ್ಯರಾತ್ರಿ ಪೂಂಚ್ ಸೆಕ್ಟರ್‌ನಲ್ಲಿ ಗಡಿ ನಿಯಂತ್ರಣ ರೇಖೆಯಲ್ಲಿ (ಎಲ್‌ಒಸಿ) ಅನುಮಾನಾಸ್ಪದ ಓಡಾಟಗಳು ಕಂಡು ಬಂದಂದ ಹಿನ್ನೆಲೆಯಲ್ಲಿ ಜಮ್ಮು ಮತ್ತು ಕಾಶ್ಮೀರ ಪೊಲೀಸರೊಂದಿಗೆ ಸೇನೆಪಡೆಗಳು ಜಂಟಿ ಕಾರ್ಯಾಚರಣೆಗಿಳಿದಿತ್ತು.

ಈ ವೇಳೆ ಬೇಲಿ ದಾಟಲು ಪ್ರಯತ್ನಿಸುತ್ತಿದ್ದ 3 ಉಗ್ರರನ್ನು ಬಂಧಿಸಲುವಲ್ಲಿ ಯಶಸ್ವಿಯಾಗಿದ್ದಾರೆ. ಗಡಿ ನುಸುಳಲು ಯತ್ನಿಸುದ್ದಿದ್ದ ಉಗ್ರರು ಸೇನಾಪಡೆಗಳ ಕಂಡ ಕೂಡಲೇ ಗುಂಡಿನ ದಾಳಿ ನಡೆಸಿದ್ದರು. ಈ ವೇಳೆ ಸ್ಥಳವನ್ನು ಸುತ್ತುವರೆದ ಭದ್ರತಾಪಡೆಗಳು, ದಿಟ್ಟ ಉತ್ತರ ನೀಡಿ ಮೂವರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಗುಂಡಿನ ಚಕಮಕಿಯಲ್ಲಿ ಓರ್ವ ಯೋಧ ಗಾಯಗೊಂಡಿದ್ದು, ಅವರನ್ನು ಸ್ಥಳಾಂತರಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಮೂವರು ಉಗ್ರರಿಂದ 10 ಕೆಜಿ ಐಇಡಿ ಮತ್ತು ನಾರ್ಕೊ ಸೇರಿದಂತೆ ಇತರೆ ಶಸ್ತ್ರಾಸ್ತ್ರಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಹೇಳಿದ್ದಾರೆ.

ರಾಜಸ್ಥಾನದಲ್ಲೂ ಜೂ. 1ರಿಂದ ಎಲ್ಲ ಕುಟುಂಬಗಳಿಗೆ 100 ಯುನಿಟ್ ಉಚಿತ ವಿದ್ಯುತ್

ಜೈಪುರ: ರಾಜಸ್ಥಾನದಲ್ಲಿ ಕಾಂಗ್ರೆಸ್ ಸರ್ಕಾರ ಬಜೆಟ್ ಘೋಷಣೆಗೆ ಅನುಗುಣವಾಗಿ ಜೂನ್ 1ರಿಂದ ಎಲ್ಲ ಕುಟುಂಬಗಳಿಗೆ ಪ್ರತಿ ತಿಂಗಳು 100 ಯುನಿಟ್ ಉಚಿತ ವಿದ್ಯುತ್ ನೀಡುವುದಾಗಿ ಪ್ರಕಟಿಸಿದೆ. ಇದು ರಾಜ್ಯದ ಗ್ರಿಡ್‌ಗಳಿಗೆ ಸಂಪರ್ಕಿತರಾಗಿರುವ ಒಂದು ಕೋಟಿಗೂ ಅಧಿಕ ಕುಟುಂಗಳಿಗೆ ನೆರವಾಗಲಿದೆ ಎಂದು ಸರ್ಕಾರ ಹೇಳಿದೆ.

ಹೊಸ ಯೋಜನೆಯಿಂದ ಸರ್ಕಾರದ ಬೊಕ್ಕಸಕ್ಕೆ 5200 ಕೋಟಿ ರೂಪಾಯಿ ಹೆಚ್ಚುವರಿ ಹೊರೆ ಬೀಳಲಿದೆ. ಉಚಿತ ವಿದ್ಯುತ್ ಯೋಜನೆ ಆಯ್ಕೆ ಮಾಡಿಕೊಳ್ಳದ ಕುಟುಂಬಗಳಿಗೆ ಹಾಲಿ ಇರುವ 300 ರೂಪಾಯಿಯಿಂದ 750 ರೂಪಾಯಿವರೆಗಿನ ಸಬ್ಸಿಡಿಯೂ ಸೇರಿದಂತೆ 7000 ಕೋಟಿ ರೂಪಾಯಿ ಹೊರೆ ಬೀಳುವ ನಿರೀಕ್ಷೆ ಇದೆ. ರಾಜ್ಯದಲ್ಲಿ 1.24 ಕೋಟಿ ಗೃಹಬಳಕೆ ವಿದ್ಯುತ್ ಗ್ರಾಹಕರಿದ್ದಾರೆ.

ಈ ಪೈಕಿ 1.04 ಕೋಟಿ ಗ್ರಾಹಕರು ಮಾಸಿಕ 100 ಯುನಿಟ್‌ಗಿಂತ ಕಡಿಮೆ ವಿದ್ಯುತ್ ಬಳಸುತ್ತಿದ್ದಾರೆ ಎಂದು ಉನ್ನತ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಬಳಕೆದಾರ ಒಂದಕ್ಕಿಂತ ಹೆಚ್ಚು ಸಂಪರ್ಕವನ್ನು ಹೊಂದಿದ್ದರೆ, ಅವರ ಜನ ಆಧಾರ್ ಕಾರ್ಡ್‌ನಲ್ಲಿ ನೋಂದಾಯಿಸಿರುವ ವ್ಯಕ್ತಿಗಳ ಸಂಖ್ಯೆಯ ಆದಾರದಲ್ಲಿ ಸೌಲಭ್ಯ ಮಂಜೂರು ಮಾಡಲಾಗುತ್ತದೆ. ಮೂರು ಮಂದಿಯ ಕುಟುಂಬ ಅಷ್ಟೇ ಸಂಖ್ಯೆಯ ಸಂಪರ್ಕ ಹೊಂದಿದ್ದರೆ, ಪ್ರತಿಯೊಬ್ಬರೂ ಉಚಿತ ವಿದ್ಯುತ್ ಕ್ಲೇಮ್ ಮಾಡಬಹುದು" ಎಂದು ಅಧಿಕಾರಿ ವಿವರಿಸಿದ್ದಾರೆ.

ಬಿಲ್ಲಿಂಗ್ ಸಾಫ್ಟ್‌ವೇರ್ ಅಪ್‌ಡೇಟ್ ಮಾಡುವುದೂ ಸೇರಿದಂತೆ ವಿದ್ಯುತ್ ವಿತರಣಾ ಸಂಸ್ಥೆಗಳು ಅಗತ್ಯ ವ್ಯವಸ್ಥೆ ಮಾಡಿಕೊಂಡಿವೆ. ಹಣದುಬ್ಬರ ಪರಿಹಾರ ಶಿಬಿರ ಎಂಬ ಸರ್ಕಾರಿ ಕಾರ್ಯಕ್ರಮದಲ್ಲಿ ನೋಂದಾಯಿಸಿಕೊಂಡ ಬಳಿಕ ಗ್ರಾಹಕರು ಉಚಿತ ವಿದ್ಯುತ್‌ಗೆ ಅರ್ಹರಾಗುತ್ತಾರೆ ಎನ್ನಲಾಗಿದೆ.

ವಿದ್ಯಾರ್ಥಿಗಳಿಗೆ ಸಿಹಿ ಸುದ್ದಿ ಕೊಟ್ಟ ಕೆಎಸ್‌ಆರ್‌ಟಿಸಿ

ಬೆಂಗಳೂರು: ಇಂದಿನಿಂದ ಕರ್ನಾಟಕದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಪ್ರಾರಂಭವಾಗಿವೆ. ವಿದ್ಯಾರ್ಥಿಗಳ ಶೈಕ್ಷಣಿಕ ತರಗತಿಗಳಿಗೆ ಹಾಜರಾಗಲು ಯಾವುದೇ ಅನಾನುಕೂಲವಾಗದಂತೆ ಕ್ರಮ ಕೈಗೊಂಡು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಸುತ್ತೋಲೆಯನ್ನು ಹೊರಡಿಸಿದೆ.

ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಆರಂಭವಾಗಿವೆ. ಈ ಹಿನ್ನೆಲೆಯಲ್ಲಿ ಕೆಎಸ್‌ಆರ್‌ಟಿಸಿ, ವಿದ್ಯಾರ್ಥಿಗಳ ಹಳೆಯ ಬಸ್ ಪಾಸ್ ಅವಧಿ ವಿಸ್ತರಿಸಿದೆ. ಜೂನ್ 15ರ ವರೆಗೂ ಹಳೆಯ ಬಸ್ ಪಾಸ್ ಅವಧಿ ವಿಸ್ತರಣೆ ಮಾಡಿ ಕೆಎಸ್‌ಆರ್‌ಟಿಸಿ ಆದೇಶ ಹೊರಡಿಸಿದ್ದು, ಇದು ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಅನ್ವಯವಾಗಲಿದೆ. ವಿದ್ಯಾರ್ಥಿ ತಮ್ಮ ಈ ಹಿಂದಿನ ವರ್ಷದ ಪಾಸ್ ಅಥವಾ ಪ್ರಸಕ್ತ ವರ್ಷದ ಶಾಲಾ ಶುಲ್ಕ ರಸೀದಿ ತೋರಿಸಿ ಬಸ್‌ಗಳಲ್ಲಿ ತೋರಿಸಿ ಪ್ರಯಾಣ ಮಾಡಬಹುದು ಎಂದು ಕೆಎಸ್‌ಆರ್‌ಟಿಸಿ ತನ್ನ ಆದೇಶದಲ್ಲಿ ತಿಳಿಸಿದೆ.

ಕರ್ನಾಟಕ ರಾಜ್ಯ ರ್ಸತೆ ಸಾರಿಗೆ ನಿಗಮವು ಪ್ರತಿ 2023-24ನೇ ಸಾಲಿನ ವಿದ್ಯಾರ್ಥಿ ಉಚಿತ ರಿಯಾಯಿತಿ ಬಸ್ ಪಾಸುಗಳನ್ನು ಇಡಿಸಿ-ಎಸ್ ಎಲಾಖೆಯ ಸೇವಾಸಿಂಧು ತಂತ್ರಾಂಶದ ಮುಖಾಂತರ ಸಂಪೂರ್ಣ ಯಾಂತ್ರೀಕೃತವಾಗಿ ವಿತರಣೆ ಮಾಡಲು ಕ್ರಮವಹಿಸಿಲಾಗುತ್ತಿದ್ದು, ಇಡಿಸಿ-ಎಸ್ ಇಲಾಖೆಯು ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ವಿದ್ಯಾರ್ಥಿಗಳಿಗೆ ಆನ್ಲೈನ್ನಲ್ಲಿ ಅರ್ಜಿ ಸಲ್ಲಿಕೆಗೆ ಹಾಗೂ ಪಾಸು ಪಡೆಯಲು ಕಾಲಾವಕಾಶ ನೀಡಬೇಕಿರುತ್ತದೆ.

ಸರ್ಕಾರಿ ನೌಕರರ ವರ್ಗಾವಣೆ: ಆಯಾ ಇಲಾಖೆ ಸಚಿವರಿಗೆ ಅಧಿಕಾರ

ಬೆಂಗಳೂರು: ಇಂದಿನಿಂದ 15 ದಿನಗಳೊಳಗೆ ಸರ್ಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆಗೆ ಆದೇಶಿಸಲಾಗಿದೆ. ರಾಜ್ಯ ಸರ್ಕಾರಿ ನೌಕರರ ಪ್ರಸಕ್ತ ಸಾಲಿನ ಸಾರ್ವತ್ರಿಕ ವರ್ಗಾವಣೆ ಪ್ರಕ್ರಿಯೆಯನ್ನು ಜೂನ್ 1ರಿಂದ 15ರೊಳಗೆ ಪೂರ್ಣಗೊಳಿಸುವಂತೆ ಸರ್ಕಾರ ಸೂಚಿಸಿದೆ. ಗ್ರೂಪ್ ಎ, ಬಿ, ಸಿ, ಡಿ ಅಧಿಕಾರಿಗಳು, ನೌಕರರಿಗೆ ಅನ್ವಯವಾಗುವಂತೆ ಕಾರ್ಯನಿರತವೃಂದ ಬಲದ ಶೇಕಡ 6 ರಷ್ಟು ಮೀರದಂತೆ ಸಾರ್ವತ್ರಿಕ ವರ್ಗಾವಣೆ ನಡೆಸಬಹುದಾಗಿದೆ. ಆಯಾ ಇಲಾಖೆ ಸಚಿವರಿಗೆ ಸಾರ್ವತ್ರಿಕ ವರ್ಗಾವಣೆ ಅಧಿಕಾರ ನೀಡಲಾಗಿದೆ. ಸರ್ಕಾರಿ ನೌಕರರ ವರ್ಗಾವಣೆ ಕುರಿತಾಗಿ ಈ ಹಿಂದೆ ಪ್ರಕಟಿಸಲಾದ ಮಾರ್ಗಸೂಚಿಯನ್ನು ಆಧರಿಸಿ ವರ್ಗಾವಣೆಗೆ ಕ್ರಮ ಕೈಗೊಳ್ಳುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ತಿಳಿಸಿದೆ.

ನಕ್ಸಲರಿಗಿಂತ ಸಿ.ಟಿ ರವಿಯೇ ಡೇಂಜರ್: ಎಸ್.ಎಲ್. ಭೋಜೇಗೌಡ

ಚಿಕ್ಕಮಗಳೂರು: ನಕ್ಸಲರಿಗಿಂತ ಸಿ.ಟಿ ರವಿಯೇ ಡೇಂಜರ್ ಎಂದು ಜೆಡಿಎಸ್ ವಿಧಾನ ಪರಿಷತ್ ಸದಸ್ಯ ಎಸ್. ಎಲ್. ಭೋಜೇಗೌಡ ವಾಗ್ದಾಳಿ ನಡೆಸಿದ್ದಾರೆ.

ಸಿ.ಟಿ ರವಿಯ ಅರ್ಬನ್ ನಕ್ಸಲ್ ಹೇಳಿಕೆಗೆ ಭೋಜೇಗೌಡ ಪ್ರತಿಕ್ರಿಯೆ ನೀಡಿದ ಅವರು, ಸಂವಿಧಾನ ಬದಲಾವಣೆ, ರಾಷ್ಟ್ರಧ್ವಜ ಇಳಿಸಿ ಭಗವಧ್ವಜ, ಹಿಂದೂ ರಾಷ್ಟ್ರದ ಹೇಳಿಕೆಗಳು ನಕ್ಸಲರಿ

ಜಿಲ್ಲೆಯಲ್ಲಿ ಜೂ.9 ರಿಂದ ಅಂತರಾಷ್ಟ್ರೀಯ ಮಾಧ್ಯಮ ಸಮ್ಮೇಳನ

ಪತ್ರಕರ್ತರು ಹೆಚ್ಚಿನ ಮಟ್ಟದಲ್ಲಿ ಪಾಲ್ಗೊಳ್ಳಲು ದಿಲೀಪ್ ಕುರಂದವಾಡೆ ಕರೆ

ಬೆಳಗಾವಿ: ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ಕುಂದಾನಗರಿ ಬೆಳಗಾವಿಯಲ್ಲಿ ಅಂತರರಾಷ್ಟ್ರೀಯ ಮಾಧ್ಯಮ ಸಮ್ಮೇಳನ ಜೂನ್.9 ರಿಂದ 11 ರವರೆಗೆ ನೆಹರು ನಗರದ ಕೆ.ಎಲ್.ಇ ಡಾ. ಹೆಚ್.ಬಿ ರಾಜಶೇಖರ ಸಭಾ ಭವನದಲ್ಲಿ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಪತ್ರಕರ್ತರು ಪಾಲ್ಗೊಳ್ಳಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ದಿಲೀಪ್ ಕುರಂದವಾಡೆ ಅವರು ತಿಳಿಸಿದರು.

ನಗರದ ಯುಕೆ–27 ಹೋಟೆಲ್ ನಲ್ಲಿ ಬುಧವಾರ ನಡೆದ (ಮೇ.31) ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬೆಳಗಾವಿ ಜಿಲ್ಲಾ ಘಟಕದಿಂದ ಆಯೋಜಿಸಲಾದ ಜೂನ್ 9 ರಿಂದ 11 ರವರಿಗೆ ನಡೆಯಲಿರುವ ಅಂತಾರಾಷ್ಟ್ರೀಯ ಮಾಧ್ಯಮ ಸಮ್ಮೇಳನ ಕುರಿತು ಪತ್ರಿಕಾಗೋಷ್ಠಿಯಲ್ಲಿ ಅವರು ಮಾಹಿತಿ ನೀಡಿದರು.

ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈದ ಪತ್ರಕರ್ತರರು ಖ್ಯಾತ ಸಂಪಾದಕರು ಹಾಗೂ ಸಾಧಕರು ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದು, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಹಾಗೂ ಕೇಂದ್ರ ಸಚಿವರಾದ ಪ್ರಲ್ಹಾದ ಜೋಷಿ ಅವರು ಸ್ಮರಣ ಸಂಚಿಕೆ ಬಿಡುಗಡೆ ಮಾಡಲಿದ್ದಾರೆ ಎಂದು ಹೇಳಿದರು.

ಬೆಳಗಾವಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಗೌರವಾಧ್ಯಕ್ಷರಾದ ಡಾ: ಭೀಮಶಿ ಜಾರಕಿಹೊಳಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವರಾದ ಲಕ್ಷ್ಮಿ ಹೆಬ್ಬಾಳಕರ ಅವರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಪಬ್ಲಿಕ್ ಟಿವಿ ಪ್ರಧಾನ ಸಂಪಾದಕರಾದ ಎಚ್.ಆರ್. ರಂಗನಾಥ, ವಿ.ಆರ್. ಎಲ್ ಗ್ರೂಪ್ ಪ್ರಧಾನ ವ್ಯವಸ್ಥಾಪಕ ಆನಂದ ಸಂಕೇಶ್ವರ ಅವರು ವಿಶೇಷ ಆಹ್ವಾನಿತರಾಗಿ ಆಗಮಿಸಲಿದ್ದಾರೆ.

ಗೌರವಾನ್ವಿತ ಅತಿಥಿಗಳಾಗಿ ಶ್ರೀಲಂಕಾ ದೇಶದ ಅಂತಾರಾಷ್ಟ್ರೀಯ ಖ್ಯಾತ ಕ್ರಿಕೆಟ್ ಪಟು ಸನತ್ ಜಯಸೂರ್ಯ, ಖ್ಯಾತ ಉದ್ಯಮಿ ಸಂಜಯ ಘೋಡಾವತ್, ಶ್ರೀಲಂಕಾ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಭೋವೆಂಕಾ ಹರ್ಥ, ಶ್ರೀಲಂಕಾ ಪ್ರವಾಸೋದ್ಯಮ ನಿಗಮದ ಅಧ್ಯಕ್ಷರಾದ ಛಲಕಾ ಗಜಬಾಹು ಹಾಗೂ ಭಾರತೀಯ ಕಾರ್ಯನಿರತ ಪತ್ರಕರ್ತರ ರಾಷ್ಟ್ರೀಯ ಒಕ್ಕೂಟದ ಅಧ್ಯಕ್ಷರಾದ ಬಿ.ವಿ ಮಲ್ಲಿಕಾರ್ಜುನಯ್ಯ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಅದೇ ರೀತಿಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಮತ್ತು ಬೆಳಗಾವಿ ಜಿಲ್ಲಾ ಘಟಕದ ಎಲ್ಲ ಪದಾಧಿಕಾರಿಗಳು ಹಾಗೂ ಸದಸ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಅಂತರಾಷ್ಟ್ರೀಯ ಮಾಧ್ಯಮ ಸಮ್ಮೇಳನದಲ್ಲಿ ಪರಿಸರ ಹಾಗೂ ಮಾಧ್ಯಮ ಚಿಂತನಾಗೋಷ್ಠಿ ನಡೆಯಲಿದ್ದು, ದಕ್ಷಿಣ ಕೊರಿಯಾದ ಹಿರಿಯ ಪತ್ರಕರ್ತೆ ಗೀತಿ–ಕಾ ತಾಲೂಕದಾರ, ಲಂಡನ್ ಹಿರಿಯ ಪತ್ರಕರ್ತರಾದ ಫಾತೂಮ್, ಶ್ರೀಲಂಕಾದ ಉಪುಲ್ ಜಯಸಿಂಘೆ, ಸೌಜ್ಞಾ ಪೌಡೆಲ್, ಡಾ. ಗೀತಾ ಕಿರಣ್, ಬಾಂಗ್ಲಾದೇಶದ ಮೊಹಮದ್ ಶಾಮೀಮ್ ಅವರು ಇರಲಿದ್ದಾರೆ ಎಂದು ಕುರಂದವಾಡೆ ಅವರು ತಿಳಿಸಿದರು.

ಜೂನ್ 9 ರಂದು ಅಂತರಾಷ್ಟ್ರೀಯ ಪತ್ರಕರ್ತರ ಆಗಮನ ಸ್ಥಳೀಯ ಪ್ರೇಕ್ಷಣೀಯ ಸ್ಥಳಗಳ ವೀಕ್ಷಣೆ, ಜೂನ್ 10 ರಂದು ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮದ ಉದ್ಘಾಟನೆ ಹಾಗೂ ಅತಿಥಿಗಳ ಭಾಷಣ ಹಾಗೂ ಮಧ್ಯಾಹ್ನ ಚಿಂತನಾಗೋಷ್ಠಿ ಕಾರ್ಯಕ್ರಮ ಅದೇ ರೀತಿಯಲ್ಲಿ ಜೂನ್ 11 ರಂದು ಅಂತಾರಾಷ್ಟ್ರೀಯ ಪತ್ರಕರ್ತರ ಬೀಳ್ಕೊಡುಗೆ ಕಾರ್ಯಕ್ರಮ ನಡೆಯಲಿದೆ.

ರಾಜ್ಯದಲ್ಲಿ ಪ್ರಥಮ ಬಾರಿಗೆ ಬೆಳಗಾವಿಯಲ್ಲಿ ಅಂತರಾಷ್ಟ್ರೀಯ ಮಾಧ್ಯಮ ಸಮ್ಮೇಳನ ಆಯೋಜಿಸಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಪತ್ರಕರ್ತರು ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷರಾದ ದಿಲೀಪ್ ಕುರಂದವಾಡೆ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಬೆಳಗಾವಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಗೌರವಾಧ್ಯಕ್ಷರಾದ ಡಾ: ಭೀಮಶಿ ಜಾರಕಿಹೊಳಿ, ಹಿರಿಯ ಪತ್ರಕರ್ತರಾದ ನೌಶದ್ ಬಿಜಾಪುರ, ಶ್ರೀಶೈಲ ಮಠದ, ಶ್ರೀಕಾಂತ ಕುಬಕಡ್ಡಿ ಅವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತ–ರಿದ್ದರು.

ವಿದ್ಯಾರ್ಥಿಗಳು ಚೆನ್ನಾಗಿ ಓದುವುದರ ಜೊತೆಗೆ ಶಾಲೆಗೆ ಮತ್ತು ಪಾಲಕರಿಗೆ ಕೀರ್ತಿ ತರಬೇಕು: ಎಂ. ಗಂಗಾಧರ

ಸಿಂಧನೂರು : ಶಾಲೆಯ ಅಭಿವೃದ್ಧಿಗೆ ಸಂಬಂಧಿಸಿ ಮತ್ತು ಶೈಕ್ಷಣಿಕವಾಗಿ ಶಾರೀರಿಕವಾಗಿ, ಭೌದ್ಧಿಕವಾಗಿ ಸಬಲೀಕರಣಗೊಳಿಸಲು ಜೂನ್ 9–2023ರಂದು ಎಸ್ ಡಿ ಎಂ ಸಿ ಹಾಗೂ ಶಿಕ್ಷಕ ವೃಂದದವರನ್ನೊಳಗೊಂಡು ಸಭೆ ನಡೆಸಿಯಿಸಿ ಸುಧೀರ್ಘ ಚರ್ಚೆ ಮಾಡುವುದರ ಮೂಲಕ ಪರಿಹಾರೋಪಾಯಗಳನ್ನು ಕಂಡುಕೊಳ್ಳಲು ಮುಂದಾಗುವ ಮೂಲಕ ಶಿಕ್ಷಕರ ಕೊರತೆ, ಕುಡಿಯುವ ನೀರು, ಸೇರಿದಂತೆ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಶ್ರಮ ಹಾಕಬೇಕಿದೆ. ವಿದ್ಯಾರ್ಥಿಗಳು ಚೆನ್ನಾಗಿ ಓದುವುದರ ಜೊತೆಗೆ ಶಾಲೆಗೆ ಮತ್ತು ಪಾಲಕರಿಗೆ ಕೀರ್ತಿ ತರಬೇಕೆಂದು ಶಾಲಾ ಸುಧಾರಣೆ ಸಮಿತಿ ಸದಸ್ಯ ಎಂ. ಗಂಗಾಧರ ಹೇಳಿದರು.

ನಗರದ ಆರ್ ಎಂ ಎಸ್ (ಆದರ್ಶ ಸರ್ಕಾರಿ ವಿದ್ಯಾಲಯ) ಶಾಲೆಯಲ್ಲಿ ಹಮ್ಮಿಕೊಂಡಿದ್ದ 2023–24ನೇ ವರ್ಷದ ಶಾಲಾ ಶೈಕ್ಷಣಿಕ ಪ್ರಾರಂಭವನ್ನು ಮಕ್ಕಳಿಗೆ ಉಚಿತ ಪಠ್ಯ ಪುಸ್ತಕ ಹಾಗೂ ಸಮವಸ್ತ್ರಗಳ ವಿತರಣೆ ಹಾಗೂ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ತಾಲೂಕಿನಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಿದ ಮಕ್ಕಳಿಗೆ ಶಾಲೆ ವತಿಯಿಂದ ಹಮ್ಮಿಕೊಂಡಿದ್ದ ಹೃತ್ಪೂರ್ವಕ ಅಭಿನಂದನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಂತರ ಎಸ್ ಡಿ ಎಂ ಸಿ ಅಧ್ಯಕ್ಷರಾದ, ನೀಲಮ್ಮ ಅಲಬನೂರು ಮತ್ತು ಸದಸ್ಯರಾದ, ಮಂಜುನಾಥ, ಅರ್ಶದ್, ಮಲ್ಲಿಕಾರ್ಜುನ ಮಾತನಾಡಿ ಶಾಲೆಯ ಅಭಿವೃದ್ಧಿ ಕುರಿತಾಗಿ ಎಲ್ಲರೂ ಕೈಜೋಡಿಸೋಣ. ಮಾದರಿ ಶಾಲೆಯನ್ನಾಗಿ ಮಾಡೋಣವೆಂದು ಹೇಳಿದರು . ಶಾಲೆಯ ಶಿಕ್ಷಕರಾದ, ಮಲ್ಲಪ್ಪ ಮಾತನಾಡಿ ಶಾಲೆಯ ಗಂಭೀರ ಸಮಸ್ಯೆಗಳನ್ನು ಬಗೆಹ–ರಿಸಲು ಶಾಲಾ ಮೇಲುಸ್ತುವಾರಿ ಸಮಿತಿ ಮುತುವರ್ಜಿ ವಹಿಸಬೇಕೆಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಶಾಲೆಯ ಮುಖ್ಯ ಗುರುಗಳಾದ, ಜಂಬಣ್ಣ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ಎಸ್ ಡಿಎಂಸಿ ಸದಸ್ಯರಾದ, ರೇಣುಕಾ, ಜುಲೇಖಾ, ಉಪಸ್ಥಿತರಿದ್ದರು. ಭೀಮರೆಡ್ಡಿ ಶಿಕ್ಷಕರು ಕಾರ್ಯಕ್ರಮದ ನಿರೂಪಣೆ ಮಾಡಿದರು. ಶಿಕ್ಷಕೀಯರಾದ, ಶ್ವೇತಾ, ಗಾಯಿತ್ರಿ, ಶ್ರೀದೇವಿ, ಹಾಗೂ ಶಿಕ್ಷಕರಾದ, ಜಡೇಶ, ಮೌನೇಶ, ಉಮೇಶ ಹಾಗೂ ಪಾಲಕರು ಮತ್ತು ವಿದ್ಯಾರ್ಥಿ – ವಿದ್ಯಾರ್ಥಿನೀಯರು ಉಪಸ್ಥಿತರಿದ್ದರು.

ಡಾ. ಅಂಬೇಡ್ಕರರಂತೆ ಓದುವ ಅಭಿರುಚಿ ನಮಗೆಲ್ಲ ಮಾದರಿಯಾಗಬೇಕು: ಶಂಕರದೇವರು ಹಿರೇಮಠ

ಸಿಂಧನೂರು : ಈ ದೇಶದ ಸಂವಿಧಾನ ಶಿಲ್ಪಿಗಳಾದ ಅಂಬೇಡ್ಕರವರು ಜ್ಞಾನದ ಕಣ–ಜಗಳಾಗಿದ್ದಾರೆ. ಅವರು ಪಡೆದ ಪದವಿಗಳು ಹಾಗೂ ಅವರು ಓದಿನಲ್ಲಿ ಹೊಂದಿದ್ದ ಅಭಿರುಚಿ ನಮಗೆಲ್ಲ ಮಾದರಿಯಾಗಬೇಕು ಎಂದು ಮುಖ್ಯ ಗುರುಗಳಾದ ಶಂಕರದೇವರ ಹಿರೇಮಠ ಹೇಳಿದರು

ತಾಲೂಕಿನ ದುಗ್ಗಮ್ಮನಗುಂಡ (ದೇವರಗುಡಿ) ಗ್ರಾಮದಲ್ಲಿ ಸರಕಾರಿ ಕಿರಿಯ ಪ್ರಾಥ–ಮಿಕ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ಅವರ ಗ್ರಂಥ–ಾಲಯವನ್ನು ಉದ್ಘಾಟಿಸಿ ಮಾತನಾಡಿದ ಅವರು ಈ ಸಾಮಾಜದಲ್ಲಿ ಶಿಕ್ಷಣವು ಪ್ರತಿಯೊಬ್ಬ ಮಕ್ಕಳಿಗೂ ಅವಶ್ಯವಾದದ್ದು. ಶಿಕ್ಷಣದಿಂದಲೇ ಜೀವನದಲ್ಲಿ ಏನಾದರೂ ಸಾಧನೆ ಮಾಡಲು ಸಾಧ್ಯ. ನೀವೆಲ್ಲಾ ತಪ್ಪದೇ ಶಾಲೆಗೆ ಬಂದು ಉತ್ತಮವಾದ ಶಿಕ್ಷಣವನ್ನು ಪಡೆಯುವ ಮೂಲಕ ಹೆತ್ತವರಿಗೆ ಕೀರ್ತಿ ತರಬೇಕು ಎಂದು ಹೇಳಿದರು.

ಪ್ರಸ್ತಾವಿಕವಾಗಿ ಸಹಶಿಕ್ಷಕ ವಿರೂಪಾಕ್ಷಪ್ಪ ಪಕೀರಪೂರ ಮಾತನಾಡಿ ಗ್ರಂಥ–ಾಲಯಗಳು ವಿದ್ಯಾರ್ಥಿಗಳ ಜ್ಞಾನವನ್ನು ವಿಕಾಸಿಸುವಂತೆ ಕೆಲಸ ಮಾಡುತ್ತವೆ. ಗ್ರಂಥ–ಾಲಯಗಳು ಮಕ್ಕಳಲ್ಲಿ ಜ್ಞಾನದ ಮಟ್ಟವನ್ನು ಹೆಚ್ಚಿಸಲು ಸಹಕಾ–ರಿಯಾಗಿದ್ದು. ಅದಕ್ಕಾಗಿ ಗ್ರಂಥ–ಾಲಯದ ಪುಸ್ತಕಗಳನ್ನು ಓದುವ ಮೂಲಕ ವಿದ್ಯಾರ್ಥಿಗಳು ಶಿಕ್ಷಣದ ಅಭಿರುಚಿಯನ್ನು ಬೆಳೆಸಿಕೊಳ್ಳಬೇಕು ಎಂದರು

ಶಾಲಾ ಪ್ರಾರಂಭೋತ್ಸವ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಗುಡದಪ್ಪ ಮಾತನಾಡಿ ಶಾಲೆಯಲ್ಲಿ ಮಕ್ಕಳ ಗ್ರಂಥಾಲಯವನ್ನು ಪ್ರಾರಂಭ ಮಾಡಿದ್ದು ತುಂಬಾ ಸಂತೋಷವಾಗಿದೆ. ನಮ್ಮ ಗ್ರಾಮದ ವಿದ್ಯಾರ್ಥಿಗಳು ಗ್ರಂಥ–ಾಲಯದ ಸದುಪಯೋಗವನ್ನು ಪಡಿಸಿಕೊಳ್ಳಬೇಕು ಎಂದು ಹೇಳಿದರು.

ನಂತರ ಶಾಲೆಗೆ ದಾನಿಗಳು ನೀಡಿದ ಮೂರು ಟೇಬಲ್, ಎರಡು ಬೆಂಚ್, ಗ್ರಂಥ–ಾಲಯ ಟೇಬಲ್, ಎರಡು ಕಪಾಟು ಗಳು ಸೇರಿದಂತೆ ಒಟ್ಟು 25000 ರೂಪಾಯಿ ಮೌಲ್ಯದ ಪೀಠೋಪಕರಣಗಳನ್ನು ಶಾಲೆಗೆ ಸ್ವೀಕಾರ ಮಾಡಿ ಮಾಜಿ ಎಸ್ ಡಿ ಎಂ ಸಿ ಅಧ್ಯಕ್ಷ ಲಕ್ಷ್ಮಣ ಮಾತನಾಡಿ ದಾನಿಗಳು ನೀಡುವ ಸಹಕಾರದಿಂದ ಮಾತ್ರ ಸರಕಾರಿ ಶಾಲೆಗಳು ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಹೇಳಿದರು.

ಬೆಳಗಾವಿಯಲ್ಲಿ ಭಯಾನಕ ಘಟನೆ; ಕೂದಲೆಯಲ್ಲಿ ಬಾಲಕಿ ಹಾವಿನಿಂದ ಬಚಾವ್

ಬೆಳಗಾವಿ; ಹೆಡೆ ಎತ್ತಿದ ಹಾವಿನಿಂದ ಪವಾಡ ಸದೃಶ್ಯ ರೀತಿ ಬಾಲಕಿ ಬಚಾವ್ ಆದ ಘಟನೆ ಬೆಳಗಾವಿ ತಾಲೂಕಿನ ಹಲಗಾ ಗ್ರಾಮದಲ್ಲಿ ನಡೆದಿದೆ.ಬಾಲಕಿ ಪಾರಾದ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಸೋಮವಾರ(ಮೇ.29) ಸಂಜೆ ಮನೆಯ ಬಾಗಿಲಿನ ಹೊಸ್ತಿಲಿನಲ್ಲಿ ನಾಗರ ಹಾವೊಂದು ಬರುತ್ತಿತ್ತು. ಇದನ್ನು ಗಮನಿಸದೇ ಪಕ್ಕದ ಮನೆಯ ಬಾಲಕಿ ಮನೆಯೊಳಗೆ ತೆರಳುತ್ತಿದ್ದಳು. ಬಾಲಕಿ ಹೊಸ್ತಿಲು ಬಳಿ ಬರುತ್ತಿದ್ದಂತೆ ಹಾವು ಹೆಡೆ ಎತ್ತಿದ್ದು, ಹಾವು ನೋಡಿದ ಬಾಲಕಿ ಹೆದರಿ ಕೂಡಲೇ ಮನೆಯೊಳಗೆ ಓಡಿದ್ದಾಳೆ. ಈ ಘಟನೆಯ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ ದೃಶ್ಯಾವಳಿಗಳು ವೈರಲ್ ಆಗಿವೆ.

ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ 112 ಬಗ್ಗೆ ಮಾಹಿತಿ

ಕೊಪ್ಪಳ : ಯಶೋಧ ಎಸ್. ವಂಟಗೋಡಿ ಐಪಿ–ಎಸ್ ಜಿಲ್ಲಾ ಪೊಲೀಸ್ ಅಧೀಕ್ಷಕರು ಕೊಪ್ಪಳ ಇವರ ನೇತೃತ್ವದಲ್ಲಿ ಪೊಲೀಸ್ ಅಧಿಕಾರಿಗಳ ಸಭೆಯನ್ನು ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ಕೈಗೊಂಡು, ಪ್ರಕರಣಗಳ ತ್ವರಿತ ವಿಲೇವಾರಿ, ಜನಸ್ನೇಹಿ ಪೊಲೀಸ್, CEIR ಪೋರ್ಟಲ್ ,ERSS-112 ಸೇವೆಯ ಸದುಪಯೋಗದ ಬಗ್ಗೆ, ರಾತ್ರಿ ಗಸ್ತು ಕರ್ತವ್ಯ , ಸೈಬರ್ ಅಪರಾಧ ಮತ್ತು ಸಂಚಾರಿ ನಿಯಮ ಉಲ್ಲಂಘನೆ ಹಾಗೂ ಇನ್ನಿತರ ಅಪರಾಧಗಳನ್ನು ತಡೆಗಟ್ಟುವಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ಪಾಲಿಸಬೇಕಾದ ಕರ್ತವ್ಯದ ಕುರಿತು ನಿರ್ದೇಶನ ನೀಡಲಾಯಿತು.

ಸಚಿವ ಸತೀಶ್ ಜಾರಕಿಹೊಳಿ ಸರಳತೆಗೆ ಸಾರ್ವಜನಿಕರ ಮೆಚ್ಚುಗೆ

ಬೆಳಗಾವಿ: ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿಯವರು ನಗರದ ಕ್ಲಬ್ ರೋಡ್ ನಲ್ಲಿರುವ ಮಹಾವೀರ್ ಕ್ಯಾಂಟೀನ್ ಲ್ಲಿ ತಿಂಡಿ ತಿನ್ನುವ ಮೂಲಕ ಮತ್ತೊಮ್ಮೆ ಸರಳತೆ ಮೇರೆದಿದ್ದಾರೆ.

ಸದಾ ಸರಳತೆಗೆ ಹೆಸರುವಾಸಿಯಾಗಿರುವ ಸತೀಶ್ ಜಾರಕಿಹೊಳಿಯವರು ತಾವು ಸಚಿವರೆನ್ನುವ ಹಂಗು ತೊರೆದು ಸಾಮಾನ್ಯರಂತೆ ಮಹಾವೀರ್ ಕ್ಯಾಂಟೀನ್ ಲ್ಲಿ ನಿಂತುಕೊಂಡೆ ತಿಂಡಿಯನ್ನು ಸವಿದಿದ್ದಾರೆ. ಸಚಿವರು ನಿಂತುಕೊಂಡೆ ತಿಂಡಿಯನ್ನು ಸವಿಯುತ್ತಿರುವ ಫೋಟೋ ಸಾಮಾಜಿಕ ಜಾಲತಾಣದಲ್ಲಿ ಕಂಡ ಸಾರ್ವಜನಿಕರು ಸಚಿವ ಸತೀಶ್ ಜಾರಕಿಹೊಳಿ ಅವರ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ.

ಈ ಸಚಿವರ ಆಪ್ತ ಮಹೇಶ್ ಕಡಪಟ್ಟಿ ಸೇರಿದಂತೆ ಹಲವು ಮುಖಂಡರು ಇದ್ದರು.

ದಾಖಲೆ ನಿರ್ಮಿಸಿದ ಕೊಪ್ಪಳ ಜಿಲ್ಲಾ ಮಾವು ಮೇಳ–2023

ಕೊಪ್ಪಳ : ಮೇ 31ರಂದು ತೆರೆ ಕಂಡ ಕೊಪ್ಪಳ ಜಿಲ್ಲಾ ಮಾವು ಮೇಳ–2023ದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಅಂದಾಜು 25 ಸಾವಿರಕ್ಕೂ ಹೆಚ್ಚು ಜನ ಪಾಲ್ಗೊಂಡಿದ್ದು 1.75 ಕೋಟಿ ರೂ. ಗೂ ಹೆಚ್ಚಿನ ವಹಿವಾಟು ನಡೆದಿದ್ದು ಹಿಂದಿನ ಮೇಳಕ್ಕಿಂತಲೂ ಅತ್ಯಂತ ಯಶಸ್ವಿಯಾಗಿದೆ.

ಹೆಚ್ಚಿನ ಗ್ರಾಹಕರು ಭಾಗವಹಿಸಿ ಹೆಚ್ಚು ಮಾವುಗಳನ್ನು ಖರೀದಿಸಿ ದಾಖಲೆ ನಿರ್ಮಿಸಿರುತ್ತಾರೆ.

ಮಾವು ಬೆಳೆಯುವ ರೈತ–ರಿಗೆ ನೇರ ಮಾರುಕಟ್ಟೆ ಒದಗಿಸುವ ಉದ್ದೇಶದಿಂದ ಕೊಪ್ಪಳ ಜಿಲ್ಲೆಯ ತೋಟಗಾರಿಕೆ ಇಲಾಖೆಯು ಮೇ 23ರಿಂದ ಮೇ 31ರವರೆಗೆ 09 ದಿನಗಳ ಕಾಲ ತೋಟಗಾ–ರಿಕೆ ಉಪನಿರ್ದೇಶಕರ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಮಾವು ಪ್ರದರ್ಶನ ಮತ್ತು ಮಾರಾಟ ಮೇಳವು ಹಿಂದಿನ ಎಲ್ಲಾ ಮೇಳಕ್ಕಿಂತ ಯಶಸ್ವಿಯಾಗಿದ್ದು, ಹೆಚ್ಚಿನ ಹಣ್ಣುಗಳ ಮಾರಾಟವಾಗಿದೆ.

55ಕ್ಕೂ ಹೆಚ್ಚು ರೈತರು ತಮ್ಮ ಹೆಸರನ್ನು ನೋಂದಾಯಿಸಿ ಮೇಳದಲ್ಲಿ ಭಾಗವಹಿಸಿದ್ದರು.

ವಿದ್ಯುತ್ ವ್ಯತ್ಯಯ

ಸಿರವಾರ : ಪಟ್ಟಣದಲ್ಲಿ ಶಿಥಿಲಗೊಂಡ ವಿದ್ಯುತ್ ಕಂಬಗಳ ಬದಲಾವಣೆ, ಮದ್ಯಂತರ ಕಂಬಗಳ ಅಳವಡಿಕೆ, ಕಂಬಗಳ ಬದಲಾವಣೆ, ಪರಿವರ್ತಕ ಕೆಲಸ, ಇನ್ನಿತರ ಕಾಮಗಾ–ರಿಗಳನ್ನು ಕೈಗೆತ್ತಿಕೊಂಡಿರುವುದ–ರಿಂದ ಇಂದು ಮುಂಜಾನೆ 09 ರಿಂದ ಸಂಜೆ 05 ಗಂಟೆಯ ವರೆಗೂ ಪಟ್ಟಣದಲ್ಲಿ ವಿದ್ಯುತ್ ಸರಬರಾಜು ಇರುವುದಿಲ್ಲ ಆದ್ದರಿಂದ ಗ್ರಾಹಕರು, ಸಾರ್ವಜನಿಕರು ಸಹಕ–ರಿಸಬೇಕೆಂದು ಜೆಸ್ಕಾಂ ಸಿರವಾರ ಉಪವಿಭಾಗದ ಎಇಇ ಬೆನ್ನಪ್ಪ ಕರಿಬಂಟನಾಳ ತಿಳಿಸಿದ್ದಾರೆ.

ಮಧ್ಯರಾತ್ರಿಲೀ, ಹೈವೇ ರಸ್ತೆಲೀ ಬೈಕ್ ಮೇಲೆ ಯುವಕ ಯುವತಿಯ ರೋಮ್ಯಾನ್ಸ್

ಉತ್ತರ ಪ್ರದೇಶದ ರಾಜಧಾನಿ ಲಖನೌದಲ್ಲಿ ಯುವಕನೊಬ್ಬ ತನ್ನ ಮಡಿಲಲ್ಲಿ ಕೂರಿಸಿಕೊಂಡು ಬೈಕ್ ಓಡಿಸುತ್ತಿರುವ ವಿಡಿಯೋ ವೈರಲ್ ಆಗಿದೆ.

ಈ ವೀಡಿಯೋ ನೋಡಿದ ನಂತರ ಜನರು ಇದನ್ನು ಪ್ರೀತಿಯ ಪರಾಕಾಷ್ಠೆ ಎಂದು ಕರೆಯುತ್ತಿದ್ದಾರೆ. ಲಖನೌ ಪೊಲೀಸರಿಂದ ಕ್ರಮಕ್ಕೆ ಒತ್ತಾಯಿಸಲಾಗುತ್ತಿದ್ದು ಈ ವಿಡಿಯೋ ಎಲ್ಲಾ ಸಾಮಾಜಿ–ಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಲಖನೌ ಅಲಿಗಂಜ್ ಪ್ರದೇಶದ ನಿರಾಲಾ ನಗರದ ಸೇತುವೆ ಎಂದು ಹೇಳಲಾದ ವೀಡಿಯೊ ವೈರಲ್ ಆಗುತ್ತಿದೆ. ಐದು ಸೆಕೆಂಡುಗಳ ಈ ವೀಡಿಯೊದಲ್ಲಿ, ಯುವಕ ಮತ್ತು ಹುಡುಗಿ ಚಲಿಸುವ ಬುಲೆಟ್ ನಲ್ಲಿ ರೋಮ್ಯಾನ್ಸ್ ಮಾಡುತ್ತಿರುವುದು ಸೆರೆಯಾಗಿದೆ.

ಗ್ರಾಮಿಣ ಭಾಗಳಲ್ಲಿ ಪಿ.ಕೆ.ಪಿ.ಎಸ್.ಸಹಕಾರಿ ಸಂಘಗಳ ಪಾತ್ರ ದೊಡ್ಡದಾಗಿದೆ : ರಮೇಶ ಕತ್ತಿ

ಹುಕ್ಕೇರಿ: ರೈತರು ಬೆಳಯಬೇಕಾದರೆ ಗ್ರಾಮಿಣ ಭಾಗಳಲ್ಲಿ ಪಿ.ಕೆ.ಪಿ. ಎಸ್.ಸಹಕಾರಿ ಸಂಘಗಳ ಪಾತ್ರ ದೊಡ್ಡದಾಗಿದೆ ಎಂದು ಬಿಡಿಸಿಸಿ ಬ್ಯಾಂಕ ಅಧಕ್ಷ ರಮೇಶ ಕತ್ತಿ ಹೆಳೀದರು.

ಅವರು ತಾಲೂಕಿನ ಯಾದಗೂಡ ಗ್ರಾಮದಲ್ಲಿ ಹೊಸ ಸದಸ್ಯರಿಗೆ 7ಲಕ್ಷ 34 ಸಾವಿರ ರೂ ಸಾಲ ವಿತರಿಸಿ ಮಾತನಾಡಿ ಸಂಘ ಸಂಸ್ಥೆಗಳು ಸದೃಡವಾಗಿ ಬೆಳಯಬೆಕಾದರೆ ಸದಸ್ಯರ ಜೊತೆ ಆಡಳಿತ ಮಂಡಳಿಯು ಕೆಲಸ ನಿರ್ವಹಿಸಿದಲ್ಲಿ ಸಂಘ ಬೇಳೆಯುವಲ್ಲಿ ಸಂದೆಹವಿಲ್ಲ.

ಯಾದಗೂಡ ಪಿ.ಕೆ. ಪಿ.ಎಸ್.ನಲ್ಲಿ 922 ಸದಸ್ಯರಿದ್ದು 8ಕೋಟಿ 19 ಲಕ್ಷ 94 ಸಾವಿರ ಬಡ್ಡಿ ರಹಿತ ಸಾಲ ವಿತರಿಸಲಾಗಿದೆ.

ಅದನ್ನು ಸರಿಯಾಗಿ ರೈತರು ಬಳಿಕೆ ಮಾಡಿಕೊಂಡು ಜಿವನ ಸುಧಾರಣೆ ಮಾಡಿಕೊಳ್ಳಬೇಕು ಸರಿಯಾದ ಸಮಯದಲ್ಲಿ ಮರು ಪಾವತಿ ಮಾಡಿದಲ್ಲಿ ಸಂಘವು ಉಳಿತ್ತದೆ ಎಂದರು.

ಗ್ರಾಮದ ಜನತೆಗೆ ಕತ್ತಿ ಮನೆತನದ ಮೇಲೆ ಇಟ್ಟ ವಿಶ್ವಾಸಕ್ಕೆ ನಾವು ಚಿರರುಣಿಯಾಗಿ ಇರುತ್ತೆವೆ ವೆಂದರು.

ಇದೆ ಸಂದರ್ಭದಲ್ಲಿ 67ಲಕ್ಷ ದಲ್ಲಿ ಪಿ.ಕೆ.ಪಿ.ಎಸ್. ಹೊಸ ಕಟ್ಟಡವನ್ನು ವಿಕ್ಷಿಸಿ ಕಾಮಗಾರಿ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದರು.

ಹುಕ್ಕೇರಿಯ ಪುರಸಭೆಯ ಅಧ್ಯಕ್ಷ ಎ.ಕೆ ಪಾಟೀಲ.ಸಂಘದ ಅದ್ಯಕ್ಷ ಅಲಗೌಡ ಪಾಟೀಲ. ಉಪಾದ್ಯಕ್ಷ ಸಂಗೀತಾ ಜನಮಟ್ಟಿ, ಮಹಾರುದ್ರ ಖರಾಡಿ, ಮಹಾಂತೇಶ ಮೆಗೆಣ್ಣಿ.ಮಲ್ಲಪ್ಪಾ ಅರಳಿಮಟ್ಟಿ. ರಾಜುಗೌಡಾಪಾಟಿಲ. ಸುವರ್ಣಾ ಪಾಟೀಲ. ಲಕ್ಷೀಭಾಯಿ ನಾವಲಗೇರ. ಬಾಜಿರಾವ ಕರೋಲಿ.ಮಾರುತಿ ಮಗೆಪ್ಪಗೋಳ. ಬಾಲಚಂದ್ರ ಕುಡಬಾಳಿ. ಗ್ರಾ.ಪಂ ಸದಸ್ಯ ಶಿವನಗೌಡಾ ಪಾಟೀಲ ಕಾರ್ಯದರ್ಶಿಮಲ್ಲಪ್ಪಾ ಜನಮಟ್ಟಿ,ಗುಮಾಸ್ತ ಅಶೋಕ ಮೆಗೆಣ್ಣಿ.ಮತ್ತು ಭೀಮಪ್ಪಾ ಚೌಗಲಾ. ಬ್ಯಾಂಕ ಇನಸ್ಪೇಕ್ಟರ ಎಮ.ಬಿ.ಹಡಾಡಿ. ಉಪಸ್ಥಿತರಿದ್ದರು.

ಇದೆ ಸಂದರ್ಭದಲ್ಲಿ ಚಿಕ್ಕೋಡಿ ತಾಲೂಕಿನ ಕಮತೆನಹಟ್ಟಿಯ ರಮೇಶ ಕತ್ತಿ ಅಭೀಮಾನಿ ಬಳಗದ ವತಿಯಿಂದ ರಮೆಶ ಕತ್ತಿ ಅವರನ್ನು ಸತ್ಕರಿಸಲಾಯಿತು.

ತಂದೆಯೊಂದಿಗೆ ಬೆಳಗಾವಿಗೆ ಬಂದಿದ್ದ ಮಗ ನಾಪತ್ತೆ: ಮಗನಿಗಾಗಿ ಠಾಣೆ ಮೇಟ್ಟಿಲೇರಿದ ತಂದೆ

ಬೆಳಗಾವಿ: ತಂದೆಯೊಂದಿಗೆ ಬೆಳಗಾವಿಗೆ ಬಂದಿದ್ದ ವಿಶೇಷಚೇತನ ಯುವಕನೋರ್ವ ಕೇಂದ್ರಿಯ ಬಸ್ ನಿಲ್ದಾಣದಿಂದ ನಾಪತ್ತೆಯಾಗಿರುವ ಘಟನೆ ನಿನ್ನೆ ಸಾಯಕಾಂಲ ನಡೆದಿದೆ.

ಮಗನಿಗಾಗಿ ತಂದೆ ನಿನ್ನೆ ಈಡೀ ರಾತ್ರಿ ಬೆಳಗಾವಿ ನಗರ ಅಲೆದಾಡಿ, ಪೊಲೀಸ್ ಠಾಣೆ ಮೇಟ್ಟಿಲೇರಿದ್ದಾರೆ.

ಹುಕ್ಕೇರಿ ತಾಲೂಕಿನ ಬೊರಗಲ್ಲ ಗ್ರಾಮದ ನಿಖಿಲ್ ರಾಜಕುಮಾರ ಮಗದುಮ್ಮ (23) ನಾಪತ್ತೆಯಾದ ಯುವಕ. ತಂದೆಯೊಂದಿಗೆ ನಿಖಿಲ್ ಮಂಗಳವಾರ ಸಂಬಂಧಿಕರ ಮನೆಗೆ ಬಂದಿದ್ದ, ಸಂಜೆ ವೇಳೆಗೆ ಊರಿಗೆ ತೆರಳಲೇಂದು ಕೇಂದ್ರಿಯ ಬಸ್ ನಿಲ್ದಾಣಕ್ಕೆ ಆಗಮಿಸಿದ್ದಾರೆ. ತಂದೆ ರಾಜಕುಮಾರ, ಮಗನನ್ನು ಬಸ್ ನಿಲ್ದಾಣದಲ್ಲಿ ಕುಳಿತುಕೊಳ್ಳಲು ಹೇಳಿ, ಸಿಹಿ ತಿಂಡಿ ಖರೀದಿಸಲು ಬೇಕರಿ ಅಂಗಡಿಗೆ ಹೋಗಿದ್ದಾರೆ. ವಾಪಸ್ ಬಂದು ನೋಡಿದಾಗ ಬುದ್ಧಿ ಮಾಂಧ್ಯ ಮಗ ನಾಪತ್ತೆಯಾಗಿದ್ದಾರೆ.

ವಿಶೇಷಚೇತನ ಯುವಕ: ಯುವಕ ಬುದ್ಧಿ ಮಾಂಧ್ಯ ಇರೊದರಿಂದ ಸ್ಪಷ್ಟವಾಗಿ ಮಾತನಾಡಲು ಬರುವುದಿಲ್ಲ, ಕಾಣೆಯಾದಾಗ ಕೆಂಪು ಶರ್ಟ್, ಜಿನ್ ಪ್ಯಾಂಟ್ ಧರಿಸಿದ, ಜನ–ರಿಗೆ ಕಂಡಲ್ಲಿ 8088235341 ಕರೆ ಮಾಡಿ ಎಂದು ತಂದೆ ಮಾಹಿತಿ ನೀಡಿದ್ದಾರೆ.

ಮಾಕೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪಿಎಚ್‌ಡಿ ಪ್ರವೇಶ ಪರೀಕ್ಷೆ ಬರೆದ ನಟಿ ಪವಿತ್ರಾ ಲೋಕೇಶ್

ವಿಜಯನಗರ: ತೆಲುಗು ನಟ ನರೇಶ್ ಜೊತೆಗೆ ಮದುವೆಯಾಗುವ ಮೂಲಕ ಸುದ್ದಿಯಲ್ಲಿದ್ದ ನಟಿ ಪವಿತ್ರಾ ಲೋಕೇಶ್ ಈಗ ಹಂಪಿ ಕನ್ನಡ ವಿಶ್ವವಿದ್ಯಾನಿಲಯದಲ್ಲಿ ಪಿಎಚ್ಡಿ ಅಧ್ಯಯನ ಕೈಗೊಳ್ಳಲು ಮುಂದಾಗಿದ್ದಾರೆ.

ಇದಕ್ಕಾಗಿ ಅವರು ಬೆಳಗಾವಿ ವಿಸ್ತರಣಾ ಕೇಂದ್ರದ ಮೂಲಕ ಕನ್ನಡ ಸಾಹಿತ್ಯ ವಿಭಾಗದಲ್ಲಿ ಪಿ ಎಚ್ ಡಿ ಮಾಡಲು ಅರ್ಜಿ ಸಲ್ಲಿಸಿದ್ದರು.ಬುಧವರ ಅವರು ಪ್ರವೇಶ ಪರೀಕ್ಷೆಗೆ ಹಾಜರಾಗಿ ಪರೀಕ್ಷೆ ಬರೆದಿದ್ದಾರೆ.

ನಟ ಮೈಸೂರು ಲೋಕೇಶ್ ಅವರ ಪುತ್ರಿಯಾಗಿರುವ ಪವಿತ್ರಾ ಲೋಕೇಶ್ ಅವರು 16 ನೇ ವಯಸ್ಸಿನಲ್ಲಿ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು ಮತ್ತು ನಂತರ 150 ಕ್ಕೂ ಹೆಚ್ಚು ಕನ್ನಡ ಚಲನಚಿತ್ರಗಳಲ್ಲಿ ನಟಿಸಿದ್ದಾರೆ.

ಅವರು ಅಭಿನಯಿಸಿದ ನಾಯಿ ನೆರಳು (2006) ಚಿತ್ರದಲ್ಲಿನ ಅವರ ಅಭಿನಯಕ್ಕಾಗಿ, ಅವರಿಗೆ ಅತ್ಯುತ್ತಮ ನಟಿಗಾಗಿ ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿ ದೊರೆತಿದೆ.

2023–24 ನೇ ಸಾಲಿನ ರಂಗ ಶಿಕ್ಷಣ ಡಿಪ್ಲೇಮಾಕ್ಕೆ ಅರ್ಜಿ ಆಹ್ವಾನ

ಧಾರವಾಡ: ಕರ್ನಾಟಕ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆಯ 2023–24ನೇ ಸಾಲಿನ ರಂಗ ಶಿಕ್ಷಣಕ್ಕೆ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಎಸ್‌ಎಸ್‌ಎಲ್ಸಿ ವಿದ್ಯಾರ್ಹತೆ ಹೊಂದಿರಬೇಕು ಮತ್ತು ರಂಗಭೂಮಿಯಲ್ಲಿ ಆಸಕ್ತಿ ಇದ್ದು, ಸ್ವಲ್ಪಮಟ್ಟಿನ ಅನುಭವ ಇರಬೇಕು, ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಊಟ, ವಸತಿ ವ್ಯವಸ್ಥೆ ಕಲ್ಪಿಸಲಾಗುವುದು, ಕರ್ನಾಟಕ ಹಾಗೂ ಭಾರತದ ರಂಗ ತಜ್ಞರಿಂದ ಮತ್ತು ಅಥಿತಿ ಉಪನ್ಯಾಸಕರಿಂದ ತರಗತಿಗಳು ನಡೆಯುತ್ತವೆ. ಒಳ್ಳೆಯ ಗ್ರಂಥಭಂಡಾರ ಹಾಗೂ ದೃಶ್ಯಶ್ರವ್ಯ ಪರಿಕರಗಳ ಅನುಕೂಲತೆ ಇದೆ. ರಂಗಶಾಲೆಯಲ್ಲಿ ವಿದ್ಯಾರ್ಥಿಗಳ ಭಾರತೀಯ ರಂಗಭೂಮಿ ಕನ್ನಡ ಮತ್ತು ನಾಟಕ ಸಾಹಿತ್ಯ ಪರಂಪರೆ, ಪಾಶ್ಚಾತ್ಯ ರಂಗಭೂಮಿ, ಅಭಿನಯ, ಆಹಾರ್ಯ, ಶಿಕ್ಷಣದಲ್ಲಿ ರಂಗಭೂಮಿ ಕು–ರಿತಾದ ಸೈಧ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ.

ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆಗೆ ಸೇರಬಯಸುವ ವಿದ್ಯಾರ್ಥಿಗಳು ರಂಗಶಾಲೆಯ ವೆಬ್ ಸೈಟ್ನಲ್ಲಿ www.the-atreschoolsanehalli.org ನಲ್ಲಿ ಪ್ರವೇಶ ಅರ್ಜಿಗಳನ್ನು ಡೌನ್ಲೋಡ್ ಮಾಡಿ ಜೂನ್ 30 ರ ಒಳಗಾಗಿ ಶ್ರೀ ಶಿವಕುಮಾರ ರಂಗಪ್ರಯೋಗಶಾಲೆ ಹೊಸದುರ್ಗ ತಾಲೂಕು, ಸಾಣೆಹಳ್ಳಿ –577515 ಗೆ ಅರ್ಜಿಗಳನ್ನು ಸಲ್ಲಿಸಬೇಕು.

ಹೆಚ್ಚಿನ ವಿವರಗಳಿಗಾಗಿ ದೂ.ಸಂ. 9448398144– 8861043553 ಮತ್ತು 9482942394 ಗೆ ಸಂಪರ್ಕಿಸಬಹುದು ಎಂದು ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆಯ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೇರ ಸಂದರ್ಶನ

ಧಾರವಾಡ : ಜಿಲ್ಲಾ ವಿಭಾಗದಲ್ಲಿ ಇರುವ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಸಂದರ್ಶನ ಕರೆಯಲಾಗಿದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣ ಪತ್ರದ ನಕಲುಗಳೊಂದಿಗೆ ಜೂನ್ 12 ರಂದು ಬೆಳಿಗ್ಗೆ 11 ಗಂಟೆಗೆ ಧಾರವಾಡ ಕೆ.ಸಿ. ಪಾರ್ಕ್ ಹತ್ತಿರ ಇರುವ ಹಿರಿಯ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ನಡೆಸುವ ನೇರ ಸಂದರ್ಶನಕ್ಕೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0836–2440442 ಸಂಪರ್ಕಿಸಬಹುದೆಂದು ಧಾರವಾಡ ವಿಭಾಗದ ಹಿರಿಯ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು: ಈಜಲು ತೆರಳಿದ್ದ ಮೂವರು ವಿದ್ಯಾರ್ಥಿಗಳ ದುರ್ಮರಣ

ಬೆಂಗಳೂರು: ಕೆರೆಯಲ್ಲಿ ಈಜಲು ಹೋಗಿದ್ದ 10ನೇ ತರಗತಿಯ ಮೂವರು ಬಾಲಕರು ನೀರುಪಾಲಾಗಿರುವ ಘಟನೆ ಎಲೆಕ್ಟ್ರಾನಿಕ್ ಸಿಟಿಯ 2ನೇ ಹಂತದ ನೀಲಾದ್ರಿ ಬಳಿ ನಡೆದಿದೆ. ಮೃತ ಬಾಲಕರನ್ನು 13 ವರ್ಷದ ಕಿರಣ್, 13 ವರ್ಷದ ತೀರ್ಥ ಮತ್ತು 14 ವರ್ಷದ ಫೈಜಲ್ ಎಂದು ಗುರುತಿಸಲಾಗಿದೆ. ನಿನ್ನೆ ಸಂಜೆ ಆಟ ಆಡಲು ಹೊರ ಹೋಗಿದ್ದ ತೀರ್ಥ ಮತ್ತು ಫೈಜಲ್ ರಾತ್ರಿ ಆದರೂ ಮನೆಗೆ ಬಾರದ ಹಿನ್ನೆಲೆ ಪೋಷಕರು ಹುಡುಕಾಡಿದ್ದು ಕೆರೆ ಬಳಿ ಬಾಲಕರ ಸೈಕಲ್, ಬಟ್ಟೆ ಮತ್ತು ಚಪ್ಪಲಿ ಪತ್ತೆಯಾಗಿವೆ. ಈಜು ಬಾರದಿದ್ದರು ಕಲ್ಲು ಕ್ವಾರಿಯಲ್ಲಿ ಈಜಲು ಹೋಗಿದ್ದಾಗ ಅವಘಡ ಸಂಭವಿಸಿದೆ.

ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

ವಿಶ್ವ ತಂಬಾಕು ರಹಿತ ದಿನ ಆಚರಣೆ

ಬೆಳಗಾವಿ: ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವ–ರಿಯ ವಿಶ್ವ ವಿದ್ಯಾಲಯ, ಮಹಾಮ್ಮೇಶನಗರ, ಬೆಳಗಾವಿ ಮೆಡಿಕಲ್ ವಿಭಾಗದ ವತಿಯಿಂದ ಮೇ 31 2023 ರಂದು ಬೆಳಗಾವಿಯ ರೈಲ್ವೆ ಸ್ಟೇಶನಿನಲ್ಲಿ ಕಾರ್ಯಕ್ರಮವನ್ನು ಆಯೋಜಿಸಲ್ಲಗಿತ್ತು. ಬ್ರಹ್ಮಾ ಕುಮಾರೀಸ್, ಬೆಳಗಾವಿ ಉಪವಲಯದ ಮುಖ್ಯಸ್ಥರಾದ ರಾಜಯೋಗಿನಿ ಬಿಕೆ ಅಂಬಿಕಾ ಅಕ್ಕನವರ ಪ್ರೇರಣೆಯಂತೆ ಕಾರ್ಯಕ್ರಮ ಅಚ್ಚುಕಟ್ಟಾಗಿ ನೆರವೇರಿತು.

ಬ್ರಹ್ಮಕುಮಾರಿಸ್ ಮುಖ್ಯಾಲಯ, ಅಬು ಪರ್ವತದಿಂದ ಆಗಮಿಸಿದ ಬಿಕೆ ಅಚ್ಯುತ್ ಅಣ್ಣನವರು ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಅರ್ಥಪೂರ್ಣವಾಗಿ ತಿಳಿಸಿದರು. ಬೆಳಗಾವಿ ರೈಲ್ವೆ ಸ್ಟೇಷನ್ ಮ್ಯಾನೇಜರ್ ಶ್ರೀ ಅನಿಲಕುಮರರು ಕಾರ್ಯಕ್ರಂದ ಯಶಸ್ಸಿಗಾಗಿ ಶುಭಕೋರಿದರು.

ಬೆಳಗಾವಿ ರೈಲ್ವೆ ಸ್ಟೇಶನ್ ಅಕಖ ಶ್ರೀ ಸಂ–ಜಯ ಕಾರೆಕರ್ ಹಾಗೂ ಬೆಳಗಾವಿ ರೈಲ್ವೆ ಸ್ಟೇಶನ್ ಕಖಖಶ್ರೀ ವೆಂಕಟೇಶ್ ರವರು ಮಾತನಾಡಿ ತಂಬಾಕು ಸೇವನೆಯ ಜಾಗೃತಿ ಮೂಡಿಸುತ್ತಿರುವ ಈ ಕಾರ್ಯಕ್ರಮ ಅತ್ಯಂತ ಉತ್ತಮ ವಿಷಯವಾಗಿದೆ ಎಂದರು.

ಆರೋಗ್ಯ ಇಲಾಖೆಯ ಇನ್ಸ್ಪೆಕ್ಟರ್ ಶ್ರೀ ಶಿವಪ್ರಕಾಶ್ ಬೆನಗಲ್ ರವರು ಬ್ರಹ್ಮಾಕುಮಾರಿಯರು ನಮ್ಮ ಕಾರ್ಯವನ್ನು ಮಾಡುತ್ತಿದ್ದರೆ. ಮುಂದಾಳತ್ವ ವಹಿಸಿ ನಾವು ಮಾಡಬೇಕಾರುವುದನ್ನು ಬ್ರಹ್ಮಕುಮಾರಿ ಸಂಸ್ಥೆಯವರು ಮಾಡುತ್ತಿದ್ದಾರೆ ಎಂದು ಹರ್ಷ ವ್ಯಕ್ತ ಪಡಿಸಿದರು.

ಚೀಫ್ ನರ್ಸಿಂಗ್ ಸೂಪರಿಂಟೆಂಡೆಂಟ್ ಶ್ರೀ ಸುನೀಲ್ ಮೈತ್ರಿ ಬ್ರಹ್ಮಾಕುಮಾರಿಯಾರು ಜನರನ್ನು ಒಳ್ಳೆಯ ಮಾರ್ಗದ ಕಡೆಗೆ ಕರೆದುಕೊಂಡು ಹೋಗುತ್ತಿದ್ದಾರೆ ಎಂದರು. ವೈದ್ಯಾಧಿಕಾರಿ ಡಾ. ಬೃಂದಾ ರವರು ಮಾತನಾಡಿ ಮನುಷ್ಯನ ಅನಾರೋಗ್ಯಕ್ಕೆ ಶೇಕಡಾ 90 ರಷ್ಟು ಭಾಗ ಮಾನಸಿಕ ವಿಚಾರಗಳೇ ಕಾರಣ. ಆದ್ದರಿಂದ ಇದರ ಜಾಗೃತಿ ಮೂಡಿಸುತ್ತಿರುವುದು ಒಳ್ಳೆಯ ಕಾರ್ಯ ಎಂದರು.

ರಾಜಯೋಗಿನಿ ಬಿಕೆ ಸುಲೋಚನಾ ಅಕ್ಕನವರು ಈಶ್ವರೀಯ ಸಂದೇಶ ನೀಡಿದರು.

ಬಿಕೆ ಮೀನಾಕ್ಷಿ ಅಕ್ಕನವರು ಕಾರ್ಯಕ್ರಮದ ಯಶಸ್ಸಿಗೆ ಶುಭಕೋರಿದರು. ಬಿಕೆ ವೀಣಾ ಅಕ್ಕನವರು ಸಂಸ್ಥೆಯ ಗುರಿ–ಉದ್ದೇಶವನ್ನು ತಿಳಿಸಿದರು. ಬಿಕೆ ಸಾಧನಾ ಅಕ್ಕನವರು ರಾಜಯೋಗ ಅಭ್ಯಾಸ ಮಾಡಿಸಿದರು.

ಬಿಕೆ ಶೋಭಾ ಅಕ್ಕನವರು ಕಾರ್ಯಕ್ರಮದ ನಿರೂಪಣೆ ಮಾಡಿದರು. ಬಿಕೆ ಶ್ರೀಕಾಂತ ಅಣ್ಣನವರು ಅತಿಥಿಗಳಿಗೆ ಸ್ವಾಗತ ಕೋರಿದರು. ಬಿಕೆ ಸುರೇಶ ಅಣ್ಣನವರು ವಂದನಾರ್ಪಣೆ ಮಾಡಿದರು.

ಬಿಕೆ ದತ್ತಾತ್ರೇಯ, ಬಿಕೆ ರಾಜೇಂದ್ರ ಗೋಟಡಕಿ, ಬಿಕೆ ಕಾಮತ್, ಬಿಕೆ ಶಿವಲೀಲಾ, ಬಿಕೆ ಸಂಪತ್ತಿ ಮುಂತಾದವರು ಉಪಸ್ಥಿತರಿದ್ದರು.

ಸಸಿ ನೆಟ್ಟು ಶಾಲಾ ಪ್ರಾರಂಭೋತ್ಸವ ಆಚರಣೆ

ಸವದತ್ತಿ : "ಮಕ್ಕಳಿಗೆ ಶಿಕ್ಷಣ ಎನ್ನುವುದು ಇಂದಿನ ಯುಗದಲ್ಲಿ ಅತ್ಯವಶ್ಯವಾಗಿ ಬೇಕಾದ ಸಾಧನವಾಗಿದೆ.

ಶಿಕ್ಷಣದಿಂದ ಮಾತ್ರ ಮಾನವನ ಏಳಿಗೆ ಸಾಧ್ಯ" ಎಂದು ಶಿಕ್ಷಕ ಎನ್.ಎನ್.ಕಬ್ಬೂರ ಅಭಿಪ್ರಾಯ ಹಂಚಿಕೊಂಡರು.

ಪಟ್ಟಣದ ಸ.ಕಿ.ಪ್ರಾ ಕನ್ನಡ ಶಾಲೆ ನಂ–6 ರಲ್ಲಿ ನಡೆದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ತೆಂಗಿನ ಸಸಿ ನೆಟ್ಟು ಮಾತನಾಡಿದ ಅವರು ಮಕ್ಕಳ ಕಲಿಕೆಯು ಯಶಸ್ವಿಯಾಗ ಬೇಕಾದರೆ ಪಾಲಕ–ಪೋಷಕರು ಮತ್ತು ಸಮೂದಾಯದವರು ಭಾಗಿದಾರರಾಗಿ ಮಗುವಿನ ಮೂಲಭೂತ ಹಕ್ಕಾದ ಶಿಕ್ಷಣವನ್ನು ಕೊಡಿಸುವಲ್ಲಿ ಶ್ರಮಿಸಬೇಕು ಎಂದರು.

ಎಲ್ಲಾ ಮಕ್ಕಳಿಗೂ ನೋಟಪುಸ್ತಕಗಳನ್ನು ನೀಡಿ ಹೋಸ ಶೈಕ್ಷಣಿಕ ವರ್ಷಕ್ಕೆ ಸ್ವಾಗತ ಕೋರಲಾಯಿತು.

ನಂತರ ಮಕ್ಕಳಿಗೆ ಸಿಹಿ ಹಂಚಲಾಯಿತು, ಈ ಸಂದರ್ಭದಲ್ಲಿ ಶಿಕ್ಷಕಿ ಎಮ್. ಆರ್,ಫಂಡಿ ಅಂಗನವಾಡಿ ಕಾರ್ಯಕರ್ತೆಯರು, ಅಡುಗೆ ಸಿಬ್ಬಂದಿಯವರು, ಪಾಲಕ–ಪೋಷಕರು ಮತ್ತು ಮಕ್ಕಳು ಹಾಜರಿದ್ದರು.

ಬೆಂಗಳೂರು ನಗರ ಪೊಲೀಸ್ ಆಯುಕ್ತರಾಗಿ ಬಿ ದಯಾನಂದ್ ಅಧಿಕಾರ ಸ್ವೀಕಾರ

ಸಂಚಾರ ನಿರ್ವಹಣೆ, ಸೈಬರ್ ಕ್ರೈಮ್ ಗೆ ಆದ್ಯತೆ: ಬಿ ದಯಾನಂದ್

ಬೆಂಗಳೂರು: ಬೆಂಗಳೂರು ನಗರದ ನೂತನ ಪೊಲೀಸ್ ಕಮಿಷನರ್ ಆಗಿ ಮೇ 31 ಬುಧವಾರ ಬಿ ದಯಾನಂದ ನಾಯಕ್ ಅವರು ಅಧಿಕೃತವಾಗಿ ಅಧಿಕಾರ ವಹಿಸಿಕೊಂಡರು. ನಿರ್ಗಮಿತ ಕಮಿಷನರ್ ಸಿ.ಎಚ್. ಪ್ರತಾಪ್ ರೆಡ್ಡಿ ಅವರು ಅಧಿಕೃತವಾಗಿ ಲಾಠಿ ಹಸ್ತಾಂತರಿಸಿದರು.

ಅಧಿಕಾರ ಸ್ವೀಕರಿಸಿದ ಬಿ. ದಯಾನಂದ ಅವರು ಬೆಂಗಳೂರಿನಲ್ಲಿ ಸಂಚಾರ ನಿರ್ವಹಣೆ ಮತ್ತು ಸೈಬರ್ ಕ್ರೈಮ್ ಮೇಲೆ ಆದ್ಯತೆಯಿಂದ ಗಮನ ಹರಿಸುವುದಾಗಿ ಹೇಳಿದ್ದಾರೆ.

ಅಧಿಕಾರ ವಹಿಸಿಕೊಂಡ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ದಯಾನಂದ ಅವರು, ಪೊಲೀಸ್ ಇಲಾಖೆ ಮೇಲೆ ಜನರಿಗೆ ನಂಬಿಕೆ ಇದೆ, ಆ ನಂಬಿಕೆ ಉಳಿಸಿಕೊಳ್ಳಲು ಶ್ರಮಿಸುತ್ತೇನೆ. ಪೊಲೀಸ್ ಆಯುಕ್ತರಾಗಿ ಬೆಂಗಳೂ–ರಿಗೆ ಸಂಬಂಧಪಟ್ಟಂತೆ ಹಲವು ಸವಾಲುಗಳಿದ್ದು, ಅವುಗಳನ್ನು ಆದ್ಯತೆ ಮೇಲೆ ತೆಗೆದುಕೊಳ್ಳಲಾಗುವುದು. ನಗರದಲ್ಲಿ ಸಂಚಾರ ನಿರ್ವಹಣೆಗೆ ನಾಗರಿಕ ಸಂಸ್ಥೆಗಳಿಂದ ಸಮನ್ವಯತೆ ಅಗತ್ಯ. ಸಂಚಾರ ದಟ್ಟಣೆಯನ್ನು ಉತ್ತಮ ರೀತಿಯಲ್ಲಿ ನಿರ್ವಹಿಸಲು ಇಲಾಖೆಯು ಏಜೆನ್ಸಿಗಳೊಂದಿಗೆ ಕೆಲಸ ಮಾಡುತ್ತದೆ ಎಂದರು.

ಟೋಯಿಂಗ್ ವ್ಯವಸ್ಥೆಯನ್ನು ಹಿಂಪಡೆಯುವ ಬಗ್ಗೆ ಇನ್ನೂ ನಿರ್ಧಾರವಾಗಿಲ್ಲ.

ಇಲಾಖೆಯು ಸಾಧಕ–ಬಾಧಕಗಳನ್ನು ಅಧ್ಯಯನ ಮಾಡಿ, ಸರ್ಕಾರಕ್ಕೆ ವರದಿ ಸಲ್ಲಿಸಲಿದೆ ಎಂದರು.

ಸೈಬರ್ ಕ್ರೈಂ ಸವಾಲು: ಸೈಬರ್ ಕ್ರೈಂ ಬೆಂಗಳೂರಿನಲ್ಲಿ ಪೊಲೀಸರಿಗೆ ಮತ್ತೊಂದು ಸವಾಲಾಗಿದೆ. ಸೈಬರ್ ಕ್ರೈಂ ಠಾಣೆಗಳಲ್ಲಿ ಪ್ರಕರಣಗಳ ಮಿತಿಮೀರಿದ್ದು, ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತನಿಖೆ ಮಾಡಲು ಪೊಲೀಸರಿಗೆ ತರಬೇತಿಯ ಅಗತ್ಯವಿದೆ.

ಸೈಬರ್ ಅಪರಾಧ ಪ್ರಕರಣಗಳನ್ನು ಸಾಮಾನ್ಯ ಠಾಣೆಗಳಲ್ಲಿ ನಿರ್ವಹಿಸಲು ಅಗತ್ಯವಿರುವ ತರಬೇತಿಯನ್ನು ಎಲ್ಲಾ ಪೊಲೀಸ್ ಅಧಿಕಾರಿಗಳಿಗೆ ನೀಡಲಾಗುವುದು. ಸೈಬರ್ ಕ್ರೈಂ ಪೊಲೀಸ್ ಸಿಬ್ಬಂದಿ ಮೇಲಿನ ಹೊರೆಯನ್ನು ಕಡಿಮೆ ಮಾಡಬೇಕಿದೆ ಎಂದು ಇದೇ ಸಂದರ್ಭದಲ್ಲಿ ಹೇಳಿದರು.

ದಯಾನಂದ್ ಅವರು 1994ರ ಬ್ಯಾಚ್ ನ ಐಪಿ

ಪಾಲಿಟೆಕ್ನಿಕ್ ಡಿಪ್ಲೋಮಾ ಕೋರ್ಸ್: ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರವೇಶ

ಬೆಳಗಾವಿ: ಕೇಂದ್ರ ಸರ್ಕಾರದ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ವತಿಯಿಂದ 2023–2024 ನೇ ಸಾಲಿನ ಬೆಳಗಾವಿಯ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ವಿಕಲಚೇತನ ವಿದ್ಯಾರ್ಥಿಗಳಿಗಳನ್ನು ಮುಖ್ಯವಾಹಿನಿಯಲ್ಲಿ ಸೇರಿಸುವ ಉದ್ದೇಶದಿಂದ ವಿವಿಧ ಕೋರ್ಸುಗಳಿಗಾಗಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಮೂರು ವರ್ಷದ ಡಿಪ್ಲೋಮಾ ಕೋರ್ಸ್‌ಗಳಲ್ಲಿ ಸುಮಾರು 50 ಪಾಲಿಟೆಕ್ನಿಕಗಳಲ್ಲಿ 25 ವಿದ್ಯಾರ್ಥಿಗಳಿಗೆ ಪ್ರವೇಶ ಸೌಲಭ್ಯ ದೊರೆಯುತ್ತಿದ್ದು, ಕರ್ನಾಟಕದಲ್ಲಿ ಮಂಗಳೂರು, ಬೆಳಗಾವಿ ಮತ್ತು ಹಾಸನ ಪಾಲಿಟೆಕ್ನಿಕಗಳಲ್ಲಿ ಡಿಪ್ಲೋಮಾ ಕೋರ್ಸುಗಳಲ್ಲಿ ಪ್ರವೇಶ ಅವಕಾಶ ಕಲ್ಪಿಸಲಾಗಿದೆ.

ಕೋರ್ಸು ವಿವರ:

ಸಿವಿಲ್ ಇಂಜನೀಯರಿಂಗ್ 4 ಸೀಟುಗಳು, ಎಲೇಕ್ಟ್ರಿಕಲ್ ಆಂಡ್ ಎಲೇಕ್ಟ್ರಾನಿಕ್ಸ್ ಇಂಜನೀಯರಿಂಗ್ 4, ಮೆಕ್ಯಾನಿಕಲ್ ಇಂಜನೀಯರಿಂಗ್ 3, ಆಟೋ ಮೋಬೈಲ್ ಇಂಜನೀಯರಿಂಗ್ 2, ಎಲೇಕ್ಟ್ರಾನಿಕ್ಸ್ ಆಂಡ್ ಕಮ್ಯುನಿಕೇಶನ ಇಂಜನೀಯರಿಂಗ್ 5, ಕಮರ್ಶಿಯಲ್ ಪ್ರಾಕ್ಟಿಸ್ (ಇಂಗ್ಲೀಷ) 3, ಕಮರ್ಶಿಯಲ್ ಪ್ರಾಕ್ಟಿಸ್ (ಕನ್ನಡ) 4, ಒಟ್ಟು 25 ಸೀಟುಗಳು ವಿಕಲಚೇತನ ವಿದ್ಯಾರ್ಥಿಗಳಿಗೆ ಲಭ್ಯ ಇರುತ್ತವೆ.

ಸದರಿ ಸಂದರ್ಶನಕ್ಕೆ ಬರುವಾಗ ಎಸ್.ಎಸ್.ಎಲ್.ಸಿ.ಅಂಕಪಟ್ಟಿ, ಸಂಬಂಧಿಸಿದ ವೈದ್ಯಾಧಿಕಾರಿಗಳಿಂದ ಪಡೆದ ಮೂಲ ವೈದ್ಯಕೀಯ ಪ್ರಮಾಣ ಪತ್ರಗಳನ್ನು ಹಾಗೂ ಖಖಐಅ ಒಳಗೊಂಡಂತೆ 5 ವರ್ಷದ ಅವಧಿಗೆ ಕರ್ನಾಟಕದಲ್ಲಿ ವ್ಯಾಸಂಗ ಮಾಡಿದ ಮೂಲ ಶಾಲೆಯ ಪ್ರಮಾಣ ಪತ್ರಗಳನ್ನು ತರಬೇಕೆಂದು ತಿಳಿಯಪಡಿಸಲಾಗಿದೆ.

ಕೋರ್ಸುಗಳಿಗೆ ಯಾವುದೇ ಶುಲ್ಕವು ಇರುವುದಿಲ್ಲ.ಪ್ರವೇಶ ಹೋಂದಿದ ವಿದ್ಯಾರ್ಥಿಗಳಿಗೆ ಸ್ಕಾಲರಶಿಪ್, ಹಾಗೂ ಲಭ್ಯವಿರುವ ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆ.

ಆಸಕ್ತರು ಜೂ. 15 2023 ರಂದು ಸಂಜೆ 5,30 ರ ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದು, ಜೂ. 16 2023 ರಂದು ಮೆರಿಟ್ ಪಟ್ಟಿ ಪ್ರಕಟಣೆಗೊಳ್ಳಲಿದ್ದು, ಜೂ.19 2023 ರಂದು ಬೆಳಿಗ್ಗೆ 11. ಘಂಟೆಗೆ ಸಂದರ್ಶನ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿಯ ಸರ್ಕಾರಿ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುನ್ನು ಕಛೇರಿಯ ವೇಳೆಯಲ್ಲಿ ಭೆಟ್ಟಿಯಾಗಬಹುದು ಎಂದು ಬೆಳಗಾವಿಯ ಸರ್ಕಾರಿ ಪಾಲಿಟೆಕ್ನಿಕ್ ಪ್ರಿನ್ಸಿಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ: ಐ.ಟಿ.ಐ ಪ್ರವೇಶ ಪ್ರಾರಂಭ

ಬೆಳಗಾವಿ: ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ 2023 ನೇ ಸಾಲಿನ ಪ್ರವೇಶ ಪ್ರಕ್ರಿಯೆಯು ಮೇ 24 2023 ರಿಂದ ಪ್ರಾರಂಭಿಸಲಾಗಿದೆ.

ಮೇ. 24 2023 ರಿಂದ ದಿ.: ಜೂ.9 2023 ರವರೆಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದು, ಜೂ. 24 2023 ರಿಂದ ಜೂ. 10 2023 ರ ವರೆಗೆ ದಾಖಲಾತಿಗಳ ಪರಿಶೀಲನೆ ಮಾಡಲಾಗುವುದು,

ಜೂ. 11 2023 ರಂದು ಜೇಷ್ಠತಾ ಪಟ್ಟಿ (Gradation List) ಪ್ರಕಟಿಸಲಾಗುವುದು, ಜೂ. 15 2023 ರಂದು Merit and Roaster ಆಧಾರದ ಮೇಲೆ ನೋಡಲ್ ಕೇಂದ್ರಗಳಲ್ಲಿ ಸೀಟು ಹಂಚಿಕೆ ಮಾಡಲಾಗುವುದು, ಹಾಗೂ 16–05–2023 ರಿಂದ ಪ್ರಥಮ ಸುತ್ತಿನ ಪ್ರವೇಶ ಪ್ರಕ್ರಿಯೆ ಆರಂಭ ವಾಗಿರುತ್ತದೆ.

ವೃತ್ತಿಗಳು : ಎಲೆಕ್ಟ್ರಿಶಿಯನ್ (NCVT) 2 ವರ್ಷಗಳು 16 ಸೀಟುಗಳು, ಫಿಟ್ಟರ್ (NCVT) 2 ವರ್ಷಗಳು 16, ಎಲಕ್ಟ್ರಾನಿಕ್ ಮೆಕ್ಯಾನಿಕ್ (NCVT) 2 ವರ್ಷಗಳು 20 ,ಐಸಿಟಿಎಸ್‌ಎಂ (NCVT) 2 ವರ್ಷಗಳು 20, ಟಿಆರ್‌ಎಸಿ (NCVT) 2 ವರ್ಷಗಳು 20, ಮೋಟರ್ ಮೆಕ್ಯಾನಿಕ ವಹಿಕಲ್ (NCVT) 2 ವರ್ಷಗಳು 20, ಟರ್ನರ್ (NCVT) 2 ವರ್ಷಗಳು 16, ಮೆಕ್ಯಾನಿಕ್ ಡಿಸೆಲ್ (NCVT) 1 ವರ್ಷಗಳು 20 ಸೀಟುಗಳು ಲಭ್ಯವಿರುತ್ತವೆ.

ಹೆಚ್ಚಿನ ಮಾಹಿತಿಗಾಗಿ (ವೃತ್ತಿಗಳು, ದಿನಾಂಕಗಳು, ನೋಡಲ್ ಕೇಂದ್ರಗಳು, ಮೆರಿಟ್, ಪ್ರವೇಶದ ದಿನಾಂಕಗಳು ಇತ್ಯಾದಿ) ಹತ್ತಿರದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಅಥವಾ ವೆಬ್‌ಸೈಟ್ www.cite.karnataka.gov.in ಮುಖಾಂತರ ಪಡೆದುಕೊಳ್ಳಬಹುದಾಗಿದೆ ಎಂದು ಗೋಕಾಕ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಪರ ಸರ್ಕಾರಿ ವಕೀಲರ ಹುದ್ದೆ : ಅರ್ಜಿ ಅಹ್ವಾನ

ಬೆಳಗಾವಿ: ಜಿಲ್ಲೆಯ ಅಥಣಿ ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಅಪರ ಸರ್ಕಾರಿ ವಕೀಲರ ಹುದ್ದೆ ಅವಧಿ ಮುಕ್ತಾಯವಾಗಿರುವ ಹಿನ್ನಲೆಯಲ್ಲಿ ಹುದ್ದೆಯನ್ನು ಭರ್ತಿ ಮಾಡಲು ಹೊಸ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಇಚ್ಛೆಯುಳ್ಳ ಅರ್ಹ ವಕೀಲರುಗಳು ತಮ್ಮ ಹೆಸರು, ವಿದ್ಯಾರ್ಹತೆ, ಜಾತಿ, ವಯಸ್ಸು, ಅನುಭವ, 7 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಪ್ರಮಾಣ ಪತ್ರ, ಮುಂತಾದ ವೈಯಕ್ತಿಕ ಪೂರ್ಣ ವಿವರಗಳೊಂದಿಗೆ ಪತ್ರಗಳ ದೃಢೀಕರಣ ನಕಲುಗಳನ್ನು ಲಗತ್ತಿಸಬೇಕು.

ಜೂಲೈ.1 2023 ರೊಳಗಾಗಿ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಆಡಳಿತ ಶಾಖೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ನಿಗದಿತ ಅವಧಿ ನಂತರ ಸ್ವೀಕೃತವಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಕ್ಕಳ ಆಟ ಪಾಠಕ್ಕೆ ಸ್ನೇಹಿತರಾಗಿ; ಪಾಲಕರಿಗೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಸಲಹೆ

ಬೆಳಗಾವಿ: ಬೆಂಡಿಗೇರಿ ಗ್ರಾಮದ ಸರಕಾರಿ ಮಾದರಿ ಕನ್ನಡ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಶಾಲಾ ಪ್ರಾರಂಭೋತ್ಸವ 2023–2024 ಕಾರ್ಯಕ್ರಮ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರ ಉಪಸ್ಥಿತಿಯಲ್ಲಿ ನಡೆಯಿತು.

ಈ ವೇಳೆ ಮಾತನಾಡಿದ ಚನ್ನರಾಜ ಹಟ್ಟಿಹೊಳಿ, "ಪಾಲಕರು ತಮ್ಮ ಮಕ್ಕಳನ್ನು ಪ್ರೀತಿಸಿ, ಪ್ರೋತ್ಸಾಹಿಸಿ ಅವರಿಗೆ ಒಳ್ಳೆಯ ಮಾರ್ಗದರ್ಶನ ನೀಡುವುದರೊಂದಿಗೆ ಶಾಲೆಯ ತರಗತಿಗಳನ್ನು ತಪ್ಪಿಸದಂತೆ ಜವಾಬ್ದಾರಿ ವಹಿಸಬೇಕು. ಜತೆಗೆ ಅವರ ಆಟ ಪಾಠದಲ್ಲಿ ಸ್ನೇಹಿತರಾಗಿ ವರ್ತಿಸುವ ಮೂಲಕ ಆಧ್ಯಾತ್ಮದ ಕಡೆಗೂ ಒಲವು ತೋರಿಸಬೇಕು" ಎಂದರು.

ಇದೇ ವೇಳೆ, ನೂತನವಾಗಿ ನಿರ್ಮಾಣಗೊಂಡ ಶಾಲಾ ಕಟ್ಟಡವನ್ನು ಚನ್ನರಾಜ ಹಟ್ಟಿಹೊಳಿ ಉದ್ಘಾಟಿಸಿದರು.

ಡಿಡಿಪಿಐ ಬಸವರಾಜ ನಾಲತ್ವಾಡ್, ಎಸ್.ಡಿ. ಗಂಜಿ, ಬಿ.ಎಚ್. ಮೆಲನಟ್ಟಿ, ಲಕ್ಷ್ಮಣ–ರಾವ್ ಯಕ್ಕುಂಡಿ, ಎ.ವೈ. ಬೆಂಡಿಗೇರಿ, ವೀರೇಂದ್ರ ಮೇಳೆದ್, ನೀಲವ್ವ ಹುಲಿಕವಿ, ಸಿದ್ದು ಹಾವಣ್ಣವರ, ಮುರುಸಿದ್ದ ಬಾಳೇಕುಂದ್ರಿ, ಪ್ರಕಾಶ ಪಾಟೀಲ, ರವಿ ಮೇಳೆದ್, ಬಸವ್ವ ಚೌಹ್ಹಾಣ, ಶಾಲಾ ಸಿಬ್ಬಂದಿ, ಗ್ರಾಮದ ಹಿರಿಯರು ಉಪಸ್ಥಿತರಿದ್ದರು.

ಕಷ್ಟ ಕಾಲದಲ್ಲಿ ಸವದಿ, ಶೆಟ್ಟರ್ ಪಕ್ಷಕ್ಕೆ ಬಂದು ಶಕ್ತಿ ತುಂಬಿದ್ದಾರೆ: ಡಿ.ಕೆ.ಶಿ

ಬೆಳಗಾವಿ: ಕಷ್ಟ ಕಾಲದಲ್ಲಿ ಲಕ್ಷ್ಮಣ ಸವದಿ, ಜಗದೀಶ್ ಶೆಟ್ಟರ್ ಅವರು ನಮ್ಮ ಪಕ್ಷಕ್ಕೆ ಬಂದು ನಮಗೆ ಶಕ್ತಿ ತುಂಬಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ತಾಲೂಕಿನ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಮಾತನಾಡಿದ ಅವರು, ಸವದಿ ಮತ್ತು ಶೆಟ್ಟರ್ ಅವರ ಜೊತೆಗೆ ಮಾತನಾಡಲು ನನಗೆ ಸಮಯವೇ ಸಿಕ್ಕಿರಲಿಲ್ಲ. ಚುನಾವಣೆ ಆದ ಮೇಲೂ ಟೈಂ ಸಿಕ್ಕಿರಲಿಲ್ಲ. ಹೀಗಾಗಿ ಸವದಿ ಸಾಹೇಬರು, ಜಗದೀಶ ಶೆಟ್ಟರ್ ಅವರನ್ನು ಭೇಟಿಯಾಗಲು ಬಂದಿದ್ದೇನೆ ಎಂದರು.

ಏನಾದರೂ ಬೇಸರವಾಗಿದ್ದಾರಾ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಯಾರಿಗೂ ಬೇಸರವಿಲ್ಲ. ನಾನೊಬ್ಬ ಪಕ್ಷದ ಅಧ್ಯಕ್ಷನಾಗಿ, ಸೀನಿಯರ್ ಲೀಡರ್ ಇದ್ದೇನೆ. ಲಕ್ಷ್ಮಣ ಸವದಿ ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದರು ಎಂಬ ವಿಚಾರ ನನಗೆ ಗೊತ್ತಿಲ್ಲ. ಕಾಂಗ್ರೆಸ್ ಪಕ್ಷ ಯಾರನ್ನೂ ಕೈ ಬಿಡುವುದಿಲ್ಲ. ಅಷ್ಟು ಮಾತ್ರ ಹೇಳುತ್ತೇನೆ. ಯಾವಾಗ, ಏನು ಎಂದು ಕೇಳಬೇಡಿ ಎಂದು ಹೇಳಿದರು.

ಸವದಿ, ಶೆಟ್ಟರ್ ಅವರಿಗೆ ಮುಂದಿನ ದಿನಗಳಲ್ಲಿ ಒಳ್ಳೆಯ ಅವಕಾಶ ಇವೆಯಾ ಎಂಬ ಪ್ರಶ್ನೆಗೆ, ಯಾರು ನಮ್ಮ ಕಷ್ಟ ಕಾಲದಲ್ಲಿ ಕೈ ಹಿಡಿದಿದ್ದಾರೆ, ಕಾಂಗ್ರೆಸ್ ಪಕ್ಷ ಅವರ ಕೈ ಹಿಡಿಯುತ್ತದೆ ಎಂದರು.

ಮೊಬೈಲ್ ನೀರಿಗೆ ಬಿದ್ದಿದ್ದಕ್ಕೆ ಡ್ಯಾಂ ಖಾಲಿ ಮಾಡಿಸಿದ್ದ ಅಧಿಕಾರಿಗೆ ಬಿತ್ತು 53 ಸಾವಿರ ರೂ. ದಂಡ

ರೈಪುರ್: ನೀರಿಗೆ ಮೊಬೈಲ್ ಬಿದ್ದಿದ್ದಕ್ಕೆ ಛತ್ತೀಸ್‌ಗಢದ ಪಾರಕೋಟ್ ಡ್ಯಾಂ ನೀರನ್ನೇ ಖಾಲಿ ಮಾಡಿಸಿದ್ದ ಆಹಾರ ನಿರೀಕ್ಷಕ ರಾಜೇಶ್ ಕುಮಾರ್ ಅವರಿಗೆ ರಾಜ್ಯ ನೀರಾವರಿ ಇಲಾಖೆ 53,092 ರೂ. ದಂಡ ವಿಧಿಸಿದೆ. ರಾಜ್ಯದ ನೀರಾವರಿ ಇಲಾಖೆಯ ಪ್ರಾಧಿಕಾರದಿಂದ ಅನುಮತಿ ಪಡೆಯದೆ ಅಧಿಕಾರಿ ಡೀಸೆಲ್ ಪಂಪ್ಗಳನ್ನು ಬಳಸಿ ನೀರನ್ನು ಹರಿಸಿದ್ದಾರೆ. ತಮ್ಮ ವೈಯಕ್ತಿಕ ಉದ್ದೇಶಕ್ಕೆ ಸಾರ್ವಜನಿಕರ ಉಪಯೋಗಕ್ಕೆ ಬಳಕೆಯಾಗುವ ನೀರನ್ನು ಅಧಿಕಾರಿ ವ್ಯರ್ಥ ಮಾಡಿದ್ದಾರೆ. ಇದು ಕಾನೂನುಬಾಹಿರ ಮತ್ತು ಛತ್ತೀಸ್‌ಗಢ ನೀರಾವರಿ ಕಾಯಿದೆಯ ಅಡಿಯಲ್ಲಿ ಶಿಕ್ಷೆಗೆ ಗುರಿಪಡಿಸಬಹುದಾದ ಅಪರಾಧಕ್ಕೆ ಸೇರುತ್ತದೆ ಎಂದು ಇಲಾಖೆಯ ಆದೇಶದಲ್ಲಿ ತಿಳಿಸಿದೆ. 4,104 ಕ್ಯೂಬಿಕ್ ಮೀಟರ್ (4.1 ಮಿಲಿಯನ್ ಲೀಟರ್) ನೀರನ್ನು ರಾಜೇಶ್ ವ್ಯರ್ಥ ಮಾಡಿದ್ದಾರೆ. ಇದಕ್ಕಾಗಿ ಪ್ರತಿ ಘನ ಮೀಟರ್ ನೀರಿಗೆ 10.50 ರೂ. ದರದಂತೆ, 43,092 ಪಾವತಿಸಲು ಸೂಚಿಸಲಾಗಿದೆ. ಅನುಮತಿ ಪಡೆಯದೆ ನೀರು ತೆರವು ಮಾಡಿದ್ದಕ್ಕೆ 10,000 ರೂ. ದಂಡ ವಿಧಿಸಲಾಗಿದೆ ಎಂದು ಆದೇಶ ಪ್ರತಿಯಲ್ಲಿ ಉಲ್ಲೇಖಿಸಲಾಗಿದೆ. ಮೇ 21 ರಂದು ಸ್ನೇಹಿತರೊಂದಿಗೆ ಪ್ರವಾಸಕ್ಕೆ ತೆರಳಿದ್ದ ಆಹಾರ ನಿರೀಕ್ಷಕ ರಾಜೇಶ್ ಕುಮಾರ್ ವಿಶ್ವಾಸ್ ಡ್ಯಾಂ ಬಳಿ ಸೆಲ್ಫಿ ತೆಗೆದುಕೊಳ್ಳಲು ಮುಂದಾಗಿದ್ದರು. ಈ ವೇಳೆ ಮೊಬೈಲ್ ಹೆಚ್ಚುವರಿ ನೀರು ಸಂಗ್ರಹ ಟ್ಯಾಂಕ್ಗೆ ಬಿದ್ದಿತ್ತು. ಅದನ್ನು ಮರಳಿ ಪಡೆಯಲು ಪಂಪ್ಸೆಟ್ಗಳನ್ನು ಬಳಸಿ ಮೂರು ದಿನಗಳ ಕಾಲ ನೀರನ್ನು ಹೊರ ಹಾಕಲಾಗಿತ್ತು. 40 ಹೆಕ್ಟೇರ್ ಕೃಷಿ ಭೂಮಿಗೆ ಬಳಸಬಹುದಾಗಿದ್ದ 4.1 ಮಿಲಿಯನ್ ಲೀಟರ್ ನೀರು ಇದರಿಂದ ವ್ಯರ್ಥವಾಗಿತ್ತು. ಈಗ ಅವರ 95,000 ರೂ. ಮೊಬೈಲ್ ಪತ್ತೆಯಾಗಿದ್ದು, ಅದು ಕಾರ್ಯನಿರ್ವಹಿಸುತ್ತಿಲ್ಲ.

ಅದ್ದೂರಿ ಕರೆಮ್ಮ ದೇವಿಯ ರಥೋತ್ಸವ

ಶಿರಸಂಗಿ: ಸ್ಥಳೀಯ ಆರಾಧ್ಯ ದೇವಿ ಕರೆಮ್ಮ ದೇವಿ ಜಾತ್ರಾ ಮಹೋತ್ಸವ ಅಂಗವಾಗಿ ಮಂಗಳವಾರ ಮುಂಜಾನೆ ದೇವಿಗೆ ವಿಷೇಶ ಪೂಜೆ, ಅಲಂಕಾರವನ್ನು ಮಾಡಲಾಗಿತ್ತು. ನಂತರ ಭಕ್ತರು ದೇವಿಗೆ ಹಣ್ಣು–ಕಾಯಿಗಳ ಮೂಲಕ ಉಡಿಯನ್ನು ತುಂಬಿದರು.

ಸಂಜೆ ದೇವಸ್ಥಾನದಿಂದ ಬಜಾರಗಲ್ಲಿಯ ವರೆಗೆ ರಥೋತ್ಸವ ಜರುಗಿತು. ರಥೋತ್ಸವದಲ್ಲಿ ಅಪಾರ ಭಕ್ತರು ಪಾಲ್ಗೊಂಡು ಜಾತ್ರೆಯನ್ನು ಯಶಸ್ವಿಗೊಳಿಸಿದರು.

ಅಕ್ರಮ ಸಂಬಂಧ; ಮನನೊಂದು ಪ್ರೇಮಿಗಳು ಆತ್ಮಹತ್ಯೆ

ಕುಷ್ಟಗಿ:ತನ್ನ ಪತಿಯ ಅಕ್ರಮ ಸಂಬಂಧದ ಹಿನ್ನೆಲೆಯನ್ನು ಪ್ರಶ್ನೆ ಮಾಡಿದ್ದಕ್ಕೆ ಗಂಡ ಹಾಗೂ ಪ್ರೇಯಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕುಷ್ಟಗಿ ತಾಲೂಕು ಮಾಲಗಿತ್ತಿ ಗ್ರಾಮದಲ್ಲಿ ನಡೆದಿದೆ.

ಮಾಲಗಿತ್ತಿ ಗ್ರಾಮದ ವಿವಾಹಿತ ಟ್ರಾಕ್ಟರ್ ಡ್ರೈವರ್ ಪೀರಸಾಬ್ ನಧಾಪ್ ನೊಂದಿಗೆ ಅದೇ ಗ್ರಾಮದ ಶಾರವ್ವ ಶರಣಪ್ಪ ಬಸಾಪೂರ ಜೊತೆ ಅಕ್ರಮ ಸಂಬಂಧ ಇತ್ತು.

ಈ ಅಕ್ರಮ ಸಂಬಂಧದ ವಿಷಯ ಪೀರಸಾಬ್ ನ ಪತ್ನಿಗೆ ಗೊತ್ತಾಗಿದೆ. ಗಂಡನ ಅಕ್ರಮದ ಬಗ್ಗೆ ಕುಪಿತಗೊಂಡ ಪತ್ನಿ, ಗಂಡನ ಪ್ರೇಯಸಿ ಶಾರವ್ವ ಜೊತೆ ಕ್ಯಾತೆ ತೆಗೆದಿದ್ದು, ಗಂಡನನ್ನು ಪ್ರಶ್ನೆ ಮಾಡಿದ್ದಾಳೆ.ಈ ಪ್ರಕರಣ ಇಷ್ಟಕ್ಕೆ ಬೀಡದೇ ಊರಿನ ಹಿರಿಯರ ಮುಂದೆ ಪ್ರಸ್ತಾಪಿಸಿದ್ದಾಳೆ. ಊರಿನ ಹಿರಿಯರು ಈ ಜಗಳ ಬುಧವಾರ ಬೆಳಗ್ಗೆ ಇತ್ಯಾಥರ್ಗೊಳಿಸುವುದಾಗಿ ತಿಳಿಸಿದ್ದಾರೆ.

ಇವರ ಅಕ್ರಮದ ಗುಟ್ಟು ಪತ್ನಿಯಿಂದ ರಟ್ಟಾಗಿರುವ ಬಗ್ಗೆ ಮನನೊಂದ ಪಾಗಲ್ ಪ್ರೇಮಿಗಳು, ಡ್ರೈವರ್ ಪೀರಸಾಬ್ ನ ಚಿಕ್ಕಪ್ಪ ಹುಸೇನಸಾಬ್ ನದಾಫ್ ಊರಿನ ಹಿರಿಯರ ಸಮ್ಮುಖದಲ್ಲಿ ಇತ್ಯಾಥರ್ವಾಗುವ ಮೊದಲೇ ಜಮೀನಿನಲ್ಲಿ ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದರು.

ಅಕ್ರಮ ಜೋಡಿಯ ದುರಂತ ಅಂತ್ಯದ ಬಗ್ಗೆ ಮಾಲಗಿತ್ತಿ ಪ್ರಕರಣ ವೈರಲ್ ಆಗಿದೆ. ಹನುಮಸಾಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಪಿಎಸೈ ಸುನೀಲ್ ಎಚ್. ಪ್ರಕರಣ ದಾಖಲಿಸಿಕೊಂಡಿದ್ದಾರೆ ಎಂದು ಸಿಪಿಐ ನಿಂಗಪ್ಪ ರುದ್ರಪ್ಪಗೋಳ ಮಾಹಿತಿ ನೀಡಿದ್ದಾರೆ.

ಕರ್ತವ್ಯ ಲೋಪ ಎಸಗಿದ ಪಿಎಸ್‌ಐ ಅಮಾನತು

ಬೀದರ್: ಅನಧಿಕೃತ ಕೆಮಿಕಲ್ ಸಂಗ್ರಹ ಮತ್ತು ಅಕ್ರಮ ಗುಟ್ಕಾ ತಯಾರಿಕೆ ಪ್ರಕರಣಗಳಲ್ಲಿ ಮಾಹಿತಿ ಕಲೆ ಹಾಕಿ ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿ ಕರ್ತವ್ಯ ಲೋಪ ಮಾಡಿದ ಹಿನ್ನೆಲೆ ಬೀದರ್ ಜಿಲ್ಲೆಯ ಪಿಎಸ್‌ಐ ಅವರನ್ನು ಅಮಾನತು ಮಾಡಲಾಗಿದೆ.

ಹುಮ್ನಾಬಾದ್ ಪಿಎಸ್‌ಐ ಮಂಜುನಾಥ ಗೌಡರನ್ನು ಅಮಾನತು ಮಾಡಲಾಗಿದ್ದು, ಹುಮ್ನಾಬಾದ್ ಸಿಪಿಐಗೆ ಎಸ್ಪಿ ಕಾರಣ ಕೇಳಿ ನೋಟಿಸ್ ನೀಡಿದ್ದಾರೆ.

ಈ ಎರಡೂ ಪ್ರಕರಣಗಳಲ್ಲಿ ಸರಿಯಾದ ಮಾಹಿತಿ ಕಲೆ ಹಾಕಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಲ್ಲಿ ವಿಫಲರಾದ ಕಾರಣ ಪಿಎಸ್‌ಐ ಅಮಾನತು ಮಾಡಿ ಬೀದರ್ ಎಸ್ಪಿ ಚೆನ್ನ ಬಸವಣ್ಣ ಲಂಗೋಟಿ ಆದೇಶ ಹೊರಡಿಸಿದ್ದಾರೆ.

ಹುಮ್ನಾಬಾದ್ ಎಎಸ್ಪಿ ವರದಿ ಆಧಾರದ ಮೇಲೆ ಅಮಾನತು ಆದೇಶ ಮಾಡಿದ್ದು, ವಿವಿಧ ನಕಲಿ ಬ್ರ್ಯಾಂಡ್‌ನ ಪಾನ್ ಮಸಾಲ ತಯಾರಿಕಾ ಘಟಕ ಹಾಗೂ ಅಕ್ರಮ ಕೆಮಿಕಲ್ ಸಂಗ್ರಹ ಪ್ರಕರಣದಲ್ಲಿ ಅಕ್ರಮಕ್ಕೆ ಬ್ರೇಕ್ ಹಾಕುವಲ್ಲಿ ಪಿಎಸ್‌ಐ ವಿಫಲರಾಗಿದ್ದಾರೆ.

ಈ ಎರಡೂ ಪ್ರಕರಣಗಳನ್ನು ಚಿಟಗುಪ್ಪ ಪಿಎಸ್‌ಐ ನೇತೃತ್ವದ ತಂಡ ದಾಳಿ ಮಾಡಿ ಕ್ರಮ ಕೈಗೊಂಡಿತ್ತು.

ಈ ಹಿನ್ನೆಲೆಯಲ್ಲಿ ಹುಮ್ನಾಬಾದ್ ಪಿಎಸ್‌ಐ ಅವರನ್ನು ಅಮಾನತು ಮಾಡಲಾಗಿದೆ.

ರಾಷ್ಟ್ರ ಮಟ್ಟದ ಜಂಗಿ ನಿಕಾಲಿ ಕುಸ್ತಿಗೆ ಸಂಸದ ಈರಣ್ಣ ಕಡಾಡಿ ಚಾಲನೆ

ಹಳ್ಳೂರ: ಅಪ್ಪಟ ಗ್ರಾಮೀಣ ಕ್ರೀಡೆಯಾದ ಕುಸ್ತಿಗೆ ಉತ್ತರ ಕರ್ನಾಟಕದ ಭಾಗದಲ್ಲಿ ಎಲ್ಲಿಲ್ಲದ ಮಹತ್ವವಿದೆ. ಈ ಭಾಗದ ಯಾವುದೇ ಜಾತ್ರೆ ನಡೆಯಲಿ ಅಲ್ಲಿ ಕ್ರೀಡೆಯಾಗಿ ಕುಸ್ತಿ ಇರಲೇಬೇಕು. ಕುಸ್ತಿಯನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಜಾತ್ರೆಗಳಲ್ಲಿ ಹಿರಿಯರು ಮುಂದುವರಿಸಿಕೊಂಡು ಬರುತ್ತಿದ್ದಾರೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಶ್ಲಾಘಿಸಿದರು.

ಹಳ್ಳೂರ ಗ್ರಾಮದ ಶ್ರೀ ದ್ಯ